# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 87 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 19–10–2024 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 87 | RNI No: KARKAN/2023/88462 | Chitradurga | Date: 19-10-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಾಲ್ಮೀಕಿ ಯಾವುದೇ ಒಂದು ಸಮಾಜದ ಸ್ವತ್ತಲ್ಲ : ಸಚಿವ ಡಿ.ಸುಧಾಕರ್ 2

ನಾಯಕನಹಟ್ಟಿ–ಮುಸ್ಟಲಗುಮ್ಮಿ ರಸ್ತೆ ಅಭಿವೃದ್ಧಿಗೆ 5 ಕೋಟಿ: ಗೋಪಾಲಕೃಷ್ಣ 3

ಹೊಸಹಳ್ಳಿ ಸರ್ಕಾರಿ ಹಿರಿಯಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆ 4



ಸುದ್ದಿ, ಜಾಹಿರಾತಿಗೆ 9686622252


ಫಾಸ್ಟ್ ನ್ಯೂಸ್

## ಜಿಲ್ಲೆಯಾದ್ಯಂತ ೮೦ ಮನೆಗಳು ಭಾಗಶಃ ಹಾನಿ

### ಚಿತ್ರದುರ್ಗ: 11.3 ಮಿ.ಮೀ ಮಳೆ



» ಚಿತ್ರದುರ್ಗ

ಗುರುವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 11.3 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 15 ಮಿ.ಮೀ,ಚಿತ್ರದುರ್ಗ ತಾಲ್ಲೂಕಿನಲ್ಲಿ6.8ಹಿರಿಯೂರು ತಾಲ್ಲೂಕು 14.2 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 13 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 6.8 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 9.6 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 10.9 ಮಿ.ಮೀ, ನಾಯಕನಹಟ್ಟಿ 24.1 ಮಿ.ಮೀ, ಪರಶುರಾಂಪುರ 15.4 ಮಿ.ಮೀ, ತಳಕು 11.4 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 5.2 ಮಿ.ಮೀ, ಭರಮಸಾಗರ 10.1 ಮಿ.ಮೀ, ಹಿರೇಗುಂಟನೂರು 10.8 ಮಿ.ಮೀ, ತುರುವನೂರು 3.2 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 23 ಮಿ.ಮೀ, ಐಮಂಗಲ 20.7 ಮಿ.ಮೀ, ಧರ್ಮಪುರ 9.3 ಮಿ.ಮೀ, ಜವನಗೊಂಡನಹಳ್ಳಿ 5.5 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 22.2 ಮಿ.ಮೀ, ಬಿ.ದುರ್ಗ 9 ಮಿ.ಮೀ, ರಾಮಗಿರಿ 22 ಮಿ.ಮೀ, ತಾಳ್ಯ 2.5 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 20.3 ಮಿ.ಮೀ, ಮಾಡದಕೆರೆ 2 ಮಿ.ಮೀ, ಮತ್ತೋಡು 0.3 ಮಿ.ಮೀ, ಶ್ರೀರಾಂಪುರ 1 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 8.5 ಮಿ.ಮೀ ಹಾಗೂ ದೇವಸಮುದ್ರದಲ್ಲಿ 10.9 ಮಿ.ಮೀ ಮಳೆಯಾಗಿದೆ.80 ಮನೆಗಳು ಭಾಗಶಃ ಹಾನಿ: ಗುರುವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 80 ಮನೆಗಳು ಭಾಗಶಃ ಹಾನಿಯಾಗಿದ್ದು, 3 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದೆ.ಚಿತ್ರದುರ್ಗ ತಾಲ್ಲೂಕಿನಲ್ಲಿ 24 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ 15 ಮನೆಗಳು, ಹೊಳಲ್ಕೆರೆ 14 ಮನೆಗಳು, ಹೊಸದುರ್ಗ 5 ಮನೆಗಳು ಭಾಗಶಃ ಹಾನಿ ಹಾಗೂ 3 ಮನೆಗಳಿಗೆ ನೀರು ನುಗ್ಗಿವೆ. ಹಿರಿಯೂರು ತಾಲ್ಲೂಕಿನಲ್ಲಿ 17 ಮನೆಗಳು ಭಾಗಶಃ ಹಾನಿ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 5 ಮನೆಗಳು ಭಾಗಶಃ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ತಿಳಿಸಿದೆ.

## ರೆಮ್ಸ್ ತಂತ್ರಾಂಶದಲ್ಲಿ ಗೇಟ್ ಎಂಟ್ರಿ ಕಡ್ಡಾಯ

» ಚಿತ್ರದುರ್ಗ

ರೈತರು ತಾವು ಬೆಳೆದ ಕೃಷಿ ಹುಟ್ಟುವಳಿಗಳನ್ನು ಕೃಷಿ ಮಾರುಕಟ್ಟೆ ಸಮಿತಿ ಪ್ರಾಂಗಣಕ್ಕೆ ತಂದಂತಹ ಸಂದರ್ಭದಲ್ಲಿ ತಾವುಗಳು ತಪ್ಪದೇ ರೆಮ್ಸ್ ತಂತ್ರಾಂಶದಲ್ಲಿ ಗೇಟ್ ಎಂಟ್ರಿಯನ್ನು ಮಾಡಿಸಬೇಕು ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ತಿಳಿಸಿದ್ದಾರೆ. ಗೇಟ್ ಎಂಟ್ರಿ ಮಾಡಿಸುವಾಗ ಕಡ್ಡಾಯವಾಗಿ ಅಧಿಕೃತ ರೈತರ ಹೆಸರು, ಹುಟ್ಟುವಳಿಯ ಅಂದಾಜು ಪ್ರಮಾಣ, ರೈತರ ಮೊಬೈಲ್ ಸಂಖ್ಯೆ, ವಿಳಾಸವನ್ನು ಹಾಗೂ ಯಾವ ಅಂಗಡಿಗೆ ಹುಟ್ಟುವಳಿಯನ್ನು ಮಾರಾಟಕ್ಕೆ ಬಿಡಲಾಗಿದೆ ಎಂದು ಕಡ್ಡಾಯವಾಗಿ ತಿಳಿಸಬೇಕು. ಟೆಂಡರ್ ಘೋಷಣೆಯಾದ ನಂತರ ಹುಟ್ಟುವಳಿಯ ನಿಗಧಿತ ತೂಕದ ಪಟ್ಟಿ ಪಡೆಯಲು ಹಾಗೂ ಬಿಳಿ ಚೀಟಿಯನ್ನು ತಿರಸ್ಕರಿಸಿ, ಅಧಿಕೃತ ಲೆಕ್ಕ ತೀರುವಳಿಯ ಪಟ್ಟಿ ಪಡೆಯತಕ್ಕದ್ದು.ಒಂದು ವೇಳೆ ರೈತರು ಅಧಿಕೃತ ವಿವರಗಳನ್ನು ನಮೂದಿಸದೇ ಇದ್ದಲ್ಲಿ, ಯಾವುದಾದರೂ ದೂರುಗಳು ಬಂದಾಗ ಬಗೆಹರಿಸಲು ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ ಕಡ್ಡಾಯವಾಗಿ ರೈತರು ತಮ್ಮ ಅಧೀಕೃತ ವಿವರಗಳನ್ನು ನಮೂದಿಸಲು ಚಿತ್ರದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಲ್ಮೀಕಿ ಆದರ್ಶಗಳು ನಾಯಕನಹಟ್ಟಿ ಗ್ರಾಮದಲ್ಲಿ ನೆಲೆಗೊಂಡಿವೆ: ರಘುಮೂರ್ತಿ





» ನಮ್ಮಜನ ಸಮಾಚಾರ

ಚಿತ್ರದುರ್ಗ:ಸಾಮರಸ್ಯ ಮತ್ತು ಭಾವೈಕ್ಯದ ನೆಲೆ ನೀಡು ನಾಯಕನಹಟ್ಟಿ ಗ್ರಾಮ ವಾಲ್ಮೀಕಿ ಮಹರ್ಷಿಗಳ ಶ್ರೀ ರಾಮಾಯಣ ಮಹಾ ಕಾವ್ಯದ ರಾಮಚಂದ್ರ ಮೂರ್ತಿಯ ಆದರ್ಶಗಳು ಈ ಪಟ್ಟಣದಲ್ಲಿ ನೆಲೆಗೊಂಡಿದೆ ಎಂದು ನಿವೃತ್ತ ಅಧಿಕಾರಿ ಎನ್ ರಘುಮೂರ್ತಿ ಹೇಳಿದರು

ಅವರು ನಾಯಕನಹಟ್ಟಿ ಪಟ್ಟಣದಲ್ಲಿ ಮಹರ್ಷಿ ವಾಲ್ಮೀಕಿ ಜಯಂತೋತ್ಸವದ ವೇದಿಕೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಇಡೀ ದಕ್ಷಿಣ ಭಾರತದಲ್ಲಿ ಇಂತಹ ಸಹ ಬಾಳ್ವೆ ಬೆಸೆದಿರುವಂತಹ ಗ್ರಾಮವನ್ನು ಕಾಣಲು ಸಾಧ್ಯವಿಲ್ಲ ಇತ್ತೀಚಿನ ದಿನಗಳಲ್ಲಿ ಜಯಂತಿಗಳನ್ನು ಆಯಾ ಜನಾಂಗದವರೇ ಸೇರಿ ಆಚರಿಸುವ ಪರಿಪಾಠವಾಗಿದೆ ಅದಕ್ಕೆ ವಿಭಿನ್ನವೆಂಬಂತೆ ಇಂದು ಈ ಪಟ್ಟಣದ ಎಲ್ಲ ಜನಾಂಗದನಾಗರಿಕರು ಸೇರಿ ವಾಲ್ಮೀಕಿ ಮಹರ್ಷಿಯ ಜಯಂತೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗಿದೆ

ಜಗತ್ತಿನ ಅಂದಾಜು 800 ಕೋಟಿ



ಜನಸಂಖ್ಯೆಯಲ್ಲಿ 500 ಕೋಟಿಗೂ ಮಿಕ್ಕಿದ ವಿವಿಧ ಧರ್ಮದವರು ಮಹರ್ಷಿ ವಾಲ್ಮೀಕಿ ಅವರ ಶ್ರೀ ರಾಮಾಯಣ ಮಹಾಕಾವ್ಯವನ್ನು ಪಾರಾಯಣ ಮಾಡುತ್ತಾರೆ ಬದುಕಿಗೆ ಶ್ರೀ ರಾಮಾಯಣ ಮಹಾಕಾವ್ಯವು ಜೀವಾಮೃತವಿದ್ದಂತೆ ಈ ಮಹಾಕಾವ್ಯದಲ್ಲಿ ಬರುವಂತಹ ಶ್ರೀರಾಮಚಂದ್ರ ಮೂರ್ತಿ ಸೀತಾ ಮಾತೆ ಭರತ ಶತ್ರುಘ್ನ ಮತ್ತು ಹನುಮಂತನ ಆದರ್ಶಗಳು ಇಡೀ ಮನುಕುಲಕ್ಕೆ ಜೀವೋತ್ಕರ್ಷ ನೀಡುತ್ತವೆ.

ಹಿಂದುಸ್ಥಾನದಬಹುತೇಕನಾಗರಿಕರುಗಳ ಮನೆ ಮತ್ತು ಮನಗಳಲ್ಲಿ ಶ್ರೀರಾಮರ ಮತ್ತು ಹನುಮಂತನ ಭಾವಚಿತ್ರಗಳಿವೆ ಮನುಷ್ಯನಿಂದ ದೈವತ್ವದ ಕಡೆಗೆ ಏರುವ ಶ್ರೀ ರಾಮನ ವ್ಯಕ್ತಿತ್ವ ಅನನ್ಯವಾದದ್ದು ಹಾಗಾಗಿ ಮಹಾಭಾರತದ ಕಾವ್ಯ ಕಿಂತ ಶ್ರೀ ರಾಮಾಯಣ ಮಹಾಕಾವ್ಯವು ಅದ್ಭುತವಾದದ್ದು ಮುಂದಿನ ಸಾವಿರಾರು ತಲೆಮಾರಿಗೂ ಶ್ರೀ ರಾಮಾಯಣ ಮಹಾ ಕಾವ್ಯದ ಮೌಲ್ಯಗಳು ಹಾಗೆ ಉಳಿದು ವೃದ್ಧಿಯಾಗುತ್ತ ಹೋಗುತ್ತವೆ ಅಹಿಂಸೆ ಮತ್ತು ಮಾನವೀಯ ಮೌಲ್ಯಗಳಿಗೆ ಪ್ರತಿರೂಪವಾಗಿರುವ ಈ ಮಹಾ ಕಾವ್ಯ ಇಂದಿನ ಯುವಕರಿಗೆ ದಾರಿದೀಪವಾಗಿದೆ ಎಂದು ಹೇಳಿದರು

ಇನ್ನೊಬ್ಬ ಮುಖ್ಯ ಅತಿಥಿಗಳಾಗಿದ್ದ ಬಂಡೆಕೊಪ್ಪಲು ಓಬಣ್ಣ ಮಾತನಾಡಿ ಎಲ್ಲರ ಸಹಕಾರದಿಂದ ಒಂದು ಕಾರ್ಯಕ್ರಮ ಅದ್ದೂರಿಯಾಗಿ ನಡೆದಿದೆ ನಿರ್ಮಾಣ ಹಂತದಲ್ಲಿರುವ ವಾಲ್ಮೀಕಿ ಭವನಕ್ಕೆ ಹಿಂದಿನ ಮಂತ್ರಿಗಳಾದ ಶ್ರೀರಾಮುಲು ಆದಿಯಾಗಿ ಈಗಿನ ಶಾಸಕರಾದ ಎನ್ ವೈ ಗೋಪಾಲಕೃಷ್ಣರವರು ಅನುದಾನ ಒದಗಿಸಿದ್ದಾರೆ.ಹಾಗಾಗಿ ಅವರಿಗೆ ಸಮಾಜದ ವತಿಯಿಂದ ಅಭಿನಂದನೆ ಸಲ್ಲಿಸೋಣ ಎಂದರು.

ಹಟ್ಟಿ ಮಲ್ಲಪ್ಪ ನಾಯಕ ಸಂಘದ ಅಧ್ಯಕ್ಷರಾದ ಪಟೇಲ್ ತಿಪ್ಪೇಸ್ವಾಮಿ ಮಾತನಾಡಿ ಇಂತಹ ಕಾರ್ಯಕ್ರಮವನ್ನು ಆಯೋಜಿಸಿ ತಿಮ್ಮಪ್ಪ ನಾಯಕ ಸಂಘ ಸಮಾಜಕ್ಕೆ ಒಂದು ಒಳ್ಳೆಯ ಸಂದೇಶವನ್ನು ನೀಡಿದೆ ಎಲ್ಲ ನಾಗರಿಕರು ತನು ಮನ ಮತ್ತು ಧನವನ್ನು ಅರ್ಪಿಸಿದ್ದಾರೆ ಯಾವುದೇ ಅವಘಡ ಗಳಿಗೆ ಎಡೆ ಮಾಡಿಕೊಡದೆ ಕಾರ್ಯಕ್ರಮವನ್ನು ಆಯೋಜಿಸಿದ ಎಲ್ಲ ನಾಗರಿಕರಿಗೂ ಮತ್ತು ಅಧಿಕಾರಿಗಳಿಗೂ ಅಭಿನಂದನೆಯನ್ನು ಸಲ್ಲಿಸಿದರು

ಪಟ್ಟಣ ಪಂಚಾಯಿತಿಯ ಸದಸ್ಯ ಅನ್ವರ್ ಮಾತನಾಡಿದರು ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತಿ ಅಧ್ಯಕ್ಷರಾದಂತ ಶ್ರೀಮತಿ ಶ್ರೀಕಾಂತ್ ಮತ್ತು ಎಲ್ಲಾ ಪಟ್ಟಣ ಪಂಚಾಯತಿ ಸದಸ್ಯರು ಹಟ್ಟಿ ಮಲ್ಲಪ್ಪ ನಾಯಕ ಸಂಘದ ಎಲ್ಲ ಸದಸ್ಯರು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಆರಕ್ಷಕರು ನಿರೀಕ್ಷಕ ಶಿವಕುಮಾರ್ ನೀರಾವರಿ ಹೋರಾಟ ಸಮಿತಿಯ ಅಧ್ಯಕ್ಷ ಮುದಿಯಪ್ಪ ಮುಂತಾದವರು ಉಪಸ್ಥಿತರಿದ್ದರು ವಿವಿಧ ವೃತ್ತಿಗಳಲ್ಲಿ ಸಾಧನೆಗೈದ ನಾಗರಿಕರಿಗೆ ಸನ್ಮಾನವನ್ನು ಹಮ್ಮಿಕೊಳ್ಳಲಾಗಿತ್ತು.

# ಶಾಸಕ ರಘುಮೂರ್ತಿ ಪುತ್ರಿ ವಿವಾಹ ಸಿದ್ದತೆ ಪರಿಶೀಲನೆ

**ಚಳ್ಳಕೆರೆ:** ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ, ರಾಜ್ಯಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿಯವರ ಪುತ್ರಿ ಸುಚಿತ್ರ, ವರುಣರವರ ವಿವಾಹ ಮಹೋತ್ಸವ ಸೆ.21ರಂದು ನಡೆಯಲಿದ್ದು, ಅಂದು ನಗರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸುವ ಹಿನ್ನೆಲೆಯಲ್ಲಿ ಹೆಲಿಪ್ಯಾಡ್ ಸ್ಥಳವನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪೂರ್ವವಲಯ ಐಜಿಪಿ ರಮೇಶ್‌ಬಾನೋತ್, ಪರಿಶೀಲನೆನಡೆಸಿದರು.

ಸೋಮವಾರ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದ ಡಿ.ಸುಧಾಕರ್ ಕ್ರೀಡಾಂಗಣದಲ್ಲಿ ವೈಭವಪೂರಿತವಾಗಿ ನಡೆಯಲಿದ್ದು, ಈಗಾಗಲೇ ಸಿದ್ದತೆಗಳು ಬರದಿಂದ ಸಾಗಿದ್ದು, ವಿವಾಹ ಕಾರ್ಯಕ್ಕೆ ರಾಜ್ಯದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆಮಂತ್ರಿಮಂಡಲದ ಸಚಿವರು, ಶಾಸಕರು ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನೂತನ ವಧುವರರನ್ನು ಆಶೀರ್ವಾದಿಸಲಿದ್ದಾರೆ. ಮುಖ್ಯಮಂತ್ರಿಗಳ ಆಗಮನದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಮತ್ತು ಪೂರ್ವವಲಯದ ಐಜಿಪಿ ನೇತೃತ್ವದಲ್ಲಿ ಬಂದೋಬಸ್ತ್ ಕಾರ್ಯಕ್ರಮವನ್ನು ವೀಕ್ಷಿಸಲಾಯಿತು. ಚಿತ್ರದುರ್ಗ ರಸ್ತೆಯ ರಾಷ್ಟ್ರೀಯ ಹೆದ್ದಾರಿ ಬೈಪಾಸ್ ಬಳಿ ಹೆಲಿಕಾಪ್ಟರ್ ನಿಲ್ದಾಣವನ್ನು ಸಿದ್ದಪಡಿಸಲು ಸ್ಥಳ ವೀಕ್ಷಣೆಯನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪೂರ್ವವಲಯ ಐಜಿಪಿ ರಮೇಶ್‌ಬಾನೋತ್, ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ಡಿವೈಎಸ್ಪಿ ಟಿ.ಬಿ.ರಾಜಣ್ಣ ವೀಕ್ಷಿಸಿದರು.



ಪ್ರಮುಖ ಸುದ್ದಿ

# ಬಾಲೇನಹಳ್ಳಿಯಲ್ಲಿ ಸೊಸೆಯರು ಕುಣಿಯುವ ವಿಶಿಷ್ಟ ಜಾತ್ರೆ

» ನಮ್ಮಜನ ಹಿರಿಯೂರು

ಗ್ರಾಮದ ಸೊಸೆಯರು ಕುಣಿಯುವ ವಿಶಿಷ್ಟ ಸಂಪ್ರದಾಯದ ಜಾತ್ರೆಯೊಂದು ತಾಲೂಕಿನ ಬಾಲೇನಹಳ್ಳಿ ಗ್ರಾಮದಲ್ಲಿ ನಡೆಯಿತು. ಕಾಡುಗೊಲ್ಲರ ಆರಾಧ್ಯ ದೇವತೆ ಗೊಲ್ಲಹಳಮ್ಮನ ಭಂಡಾರೋತ್ಸವ ಗುರುವಾರ ಸಂಭ್ರಮದಿಂದ ಜರುಗಿತು. ಈ ಭಂಡಾರೋತ್ಸವದಲ್ಲಿ ಗ್ರಾಮದ ಸೊಸೆಯಂದಿರು ಪ್ರತಿ ವರ್ಷವೂ ಕುಣಿಯುವುದು ವಾಡಿಕೆಯಾಗಿದೆ.

ದಸರಾ ಹಬ್ಬದ ವಿಜಯದಶಮಿ ಅಂಬಿನ್'ಓತ್ಸ'ವ'ದ'ಒಂದಿಗ' ಆರಂಭವಾಗುವ ಈ ಜಾತ್ರೆ ಏಕಾದಶಿ ವಿಶೇಷ ಪೂಜೆ, ದ್ವಾದಶಿ, ಹರಿಸೇವೆ, ಕುರಿ ಕರೆಯುವ ಉತ್ಸವ, ಪಲ್ಲಕ್ಕಿ ಉತ್ಸವ, ಆರತಿ, ಸಿಡಿ ಮದ್ದಿನ ಉತ್ಸವ, ಮರುದಿನ ಭಂಡಾರೋತ್ಸವ ಕಾರ್ಯಕ್ರಮದೊಂದಿಗೆ ವಿಜೃಂಭಣೆಯಿಂದ ಕೊನೆಗೊಳ್ಳುತ್ತದೆ.

ಹಬ್ಬದ ಕೊನೆಯ ದಿನದಲ್ಲಿ ಸೊಸೆಯಂದಿರು ಸೀರೆಯುಟ್ಟು, ಕೈಯಲ್ಲಿ ಬೇವಿನ ಸೊಪ್ಪು ಹಿಡಿದು ದೇವಿಯ ಭಂಡಾರವನ್ನ ಹಣೆಗೆ ಇಟ್ಟುಕೊಂಡು ಸ್ವಯಂ ಪ್ರೇರಿತರಾಗಿ ವಾಲಗ ಹಾಗೂ



ತಮಟೆಯ ಸದ್ದಿಗೆ ಹೆಜ್ಜೆ ಹಾಕುವ ಮೂಲಕ ಹರಕೆ ತೀರಿಸುತ್ತಾರೆ.

ಚಿತ್ತಮುತ್ತಿ ಕುಲದ ಕರಡಿ ಕುಳ್ಳಪ್ಪನ ವಂಶಸ್ಥರಾದ ಕರಡಿಗೊಲ್ಲರು ಈ ಶ್ರೀದೇವಿ ಗೊಲ್ಲಳ್ಳಮ್ಮ, ಶ್ರೀ ಚಿತ್ರಲಿಂಗೇಶ್ವರ ಸ್ವಾಮಿ ಹಾಗೂ ತಿಮ್ಮಪ್ಪ ಸ್ವಾಮಿಯನ್ನು ಆರಾಧನೆ ಮಾಡಿಕೊಂಡು ಬರುತ್ತಿದ್ದಾರೆ. ವಾರದವರೆಗೂ ದಸರಾ ಹಬ್ಬವನ್ನು ವಿಶೇಷವಾಗಿ ವೈಭವದಿಂದ ಆಚರಿಸಿಕೊಂಡು ಬರಲಾಗುತ್ತದೆ. ಗ್ರಾಮದಲ್ಲಿ ಬಹುತೇಕ ಕರಡಿಗೊಲ್ಲರ ಬೆಡಗಿನ ಮನೆಗಳಿವೆ. ಈ ಕುಟುಂಬಗಳಿಗೆ ಸೊಸೆಯಾಗಿ ಬಂದವರು ಪ್ರತಿಯೊಬ್ಬರು ಈ ಭಂಡಾರ ಉತ್ಸವದಲ್ಲಿ ಭಾಗಿಯಾಗಿ ಕುಣಿಯುವ ಮೂಲಕ ಈ ಸಂಪ್ರದಾಯ ಆಚರಣೆ ಮಾಡಿಕೊಂಡು ಬರುತ್ತಿರುವುದು ತಾಲೂಕಿನಲ್ಲಿಯೇ ವಿಶಿಷ್ಟವಾಗಿದೆ.

ಗ್ರಾಮಕ್ಕೆ ಮದುವೆಯಾಗಿ ಬಂದ ಸೊಸೆಯಂದಿರು ಕುಣಿಯದಿದ್ದರೆ ಗ್ರಾಮದೇವತೆ ಗೊಲ್ಲಳಮ್ಮ ಕುಣಿಯುತ್ತಾಳೆ. ಹೀಗಾಗಿ ಅಮ್ಮನ ಅಪ್ಪಣೆಯಂತೆ ಅನಾದಿಕಾಲದಿಂದಲೂ ಸೊಸೆಯಂದಿರು ಈ ಉತ್ಸವದಲ್ಲಿ ಕುಣಿಯುವುದು ವಾಡಿಕೆಯಾಗಿ ಮುಂದುವರೆದುಕೊಂಡು ಬಂದಿದೆ.

ಹಬ್ಬದ ಕೊನೆಯ ಭಂಡಾರೋತ್ಸವದ ದಿನದಂದು ಗ್ರಾಮದಲ್ಲಿ ಶಾಂತಿ, ಸಮೃದ್ಧಿಗಾಗಿ ದೇವರು ಮನೆ ಮನೆಗೆ ಭೇಟಿ ನೀಡುತ್ತದೆ.ಬಳಿಕಸೊಸೆಯಂದಿರುಗ್ರಾಮದ ಹನುಮಂತರಾಯ ದೇವಸ್ಥಾನದಿಂದ ಕುಣಿತ ಆರಂಭಿಸುತ್ತಾರೆ. ಇದಾದ ಬಳಿಕ ಮಣೇವು ಕಾರ್ಯಕ್ರಮದೊಂದಿಗೆ ದಸರಾ ಹಬ್ಬ ಕೊನೆಗೊಳ್ಳುತ್ತದೆ.

ನಮ್ಮೂರಿನ ದೇವಿಗೆ ಕುಣಿಯುವುದು ಎಂದರೆ ಅದು ಭಕ್ತಿಯ ಸಂಕೇತವಾಗಿದೆ. ಹಾಗಾಗಿ ನಾವು ದೇವಿಯನ್ನು ಸಂತೃಪ್ತಿಗೊಳಿಸಲು ಕುಣಿಯುತ್ತೇವೆ. ಮಕ್ಕಳ ಜೊತೆ ಕುಣಿಸಿಕೊಳ್ಳುವುದು ದೇವಿಗೆ ಇಷ್ಟವಿಲ್ಲ. ಹಾಗಾಗಿ ವಿಶೇಷವಾಗಿ ಸೊಸೆಯಂದಿರು ಕುಣಿದಾಗ ದೇವಿ ಸಂತೃಪ್ತಿಯಾಗುತ್ತಾಳೆ. ಗ್ರಾಮದಲ್ಲಿ ಉತ್ತಮ ಮಳೆಯಾಗಲಿ, ಯಾವುದೇ ರೋಗ ರುಜಿನಗಳು ಬಾರದಿರಲಿ, ಊರು ಅಭಿವೃದ್ಧಿಯಾಗಲಿ, ಶಾಂತಿ ನೆಮ್ಮದಿ ದೊರಕಲಿ ಎಂಬುದು ಕುಣಿತದ ಸಂಕೇತವಾಗಿದೆ ಎನ್ನುತ್ತಾರೆ ದೇವಿಯ ಸೊಸೆಯಂದಿರು.

# ವಾಲ್ಮೀಕಿ ಯಾವುದೇ ಒಂದು ಸಮಾಜದ ಸ್ವತ್ತಲ್ಲ

» ಹಿರಿಯೂರು

ಮಹರ್ಷಿ ವಾಲ್ಮೀಕಿಯವರು ಯಾವುದೇ ಒಂದು ಸಮಾಜದ ಸ್ವತ್ತಲ್ಲ, ಜಾತಿ-ಮತ-ಕುಲವನ್ನು ಮೀರಿ ಎತ್ತರಕ್ಕೆ ಬೆಳೆದಂತಹ ವ್ಯಕ್ತಿಯಾಗಿದ್ದು, ರಾಮಾಯಣದಂತಹ ಮಹಾಕಾವ್ಯವನ್ನು ರಚಿಸುವ ಮೂಲಕ ಅವರು ಜಗತ್ತಿಗೆ ಸಾರಿದ ಸಂದೇಶಗಳು ಇಡೀ ಮನುಕುಲಕ್ಕೆ ಆದರ್ಶಪ್ರಾಯವಾಗಿವೆ ಎಂಬುದಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಸಮಾಜಕಲ್ಯಾಣ ಇಲಾಖೆ, ನಗರಸಭೆ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿಯವರು ಬರೆದ ರಾಮಾಯಣ ಮಹಾಕಾವ್ಯವು ಭಾರತದಲ್ಲಿ ಮಾತ್ರವಲ್ಲದೆ ಪ್ರಪಂಚದಲ್ಲೇ ಒಂದು ಅತ್ಯದ್ಭುತವಾದ ಗ್ರಂಥವಾಗಿದ್ದು, ಈ ವಾಲ್ಮೀಕಿ ರಾಮಾಯಣವು ಇಂಡೋನೇಷಿಯಾ, ಸೇರಿದಂತೆ ಆಗ್ನೇಯದ ಹಲವು ರಾಷ್ಟ್ರಗಳಲ್ಲಿ ಕೂಡ ಅತ್ಯಂತ ಪ್ರಸಿದ್ಧಿ ಪಡೆದಿದೆ, ವಾಲ್ಮೀಕಿಯವರು ಮಾನವ ಜನಾಂಗದ ಕಲ್ಯಾಣಕ್ಕಾಗಿಯೇ ಸಂಸ್ಕೃತದಲ್ಲಿ ರಾಮಾಯಣ ಮಹಾಕಾವ್ಯವನ್ನು



ರಚಿಸಿದರು ಎಂಬುದಾಗಿ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ವಾಲ್ಮೀಕಿ ಸಮಾಜದ ಮುಖಂಡರುಗಳು ಹಿರಿಯೂರನ್ನು ಕಟ್ಟಿದಂತಹ ಕೆಂಚಪ್ಪ ನಾಯಕರ ಹೆಬ್ಬಾಗಿಲು ಇದೆ, ಆ ಸರ್ಕಲ್ ಗೆ ಕೆಂಚಪ್ಪನಾಯಕರ ಸರ್ಕಲ್ ಎಂದು ಹೆಸರಿಡಬೇಕು ಎಂದರಲ್ಲದೆ, ರಸ್ತೆ ಅಗಲೀಕರಣ ಕಾಮಗಾರಿಯನ್ನು ಅತಿ ತ್ವರಿತವಾಗಿ ಮುಗಿಸಬೇಕು ಎಂಬುದಾಗಿ ಸಚಿವರಿಗೆ ಮನವಿ ಮಾಡಿದರು.

ಮನವಿಗೆ ಪ್ರತಿಕ್ರಿಯಿಸಿದ ಸಚಿವರಾದ ಡಿ.ಸುಧಾಕರ್ ರವರು ರಸ್ತೆ ಅಗಲೀಕರಣ ಕಾಮಗಾರಿಯನ್ನು ಸುಮಾರು 80 ಕೋಟಿ ವೆಚ್ಚದಲ್ಲಿ ನಡೆಸಲಾಗುತ್ತಿದ್ದು, ಕಾಮಗಾರಿ ನಡೆಸಲು ಹೆಚ್ಚು ಕೆಲಸಗಾರರು ಕಾರ್ಯಪ್ರವೃತ್ತರಾಗಿದ್ದು,

ನಗರದಲ್ಲಿ ಅತಿ ಬೇಗನೆ ಈ ರಸ್ತೆ ಅಗಲೀಕರಣ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂಬುದಾಗಿ ಹೇಳಿದರು.ತುಮಕೂರು ವಿಶ್ವವಿದ್ಯಾಲಯದ ಸಹಪ್ರಾಧ್ಯಾಪಕರಾದ ಡಾ.ನಾಗಭೂಷಣ್ ಮಾತನಾಡಿ, ವಿಶ್ವಕವಿ ಎಂದೇ ಪ್ರಸಿದ್ಧಿಯಾಗಿರುವ ಮಹರ್ಷಿ ವಾಲ್ಮೀಕಿಯವರ ಸಂದೇಶಗಳು ಇಂದಿಗೂ ಪ್ರಸ್ತುತವಾಗಿದ್ದು, ರಾಮಾಯಣ ಮಹಾಕಾವ್ಯದ ಮೂಲಕ ಪಿತೃವಾಕ್ಯ ಪರಿಪಾಲನೆ,ಸಹೋದರರ ಭ್ರಾತೃತ್ವದಂತಹ ವಿಶಿಷ್ಟ ಮೌಲ್ಯಗಳನ್ನು ಅವರು ಜಗತ್ತಿಗೆ ಸಾರಿದರು ಎಂದರಲ್ಲದೆ,

ಇಂದಿನ ಯುವಜನಾಂಗ ತಮ್ಮ ಬದುಕಿನಲ್ಲಿ ವಾಲ್ಮೀಕಿಯವರ ತತ್ವ-ಆದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ಸಾಮರಸ್ಯ ಬದುಕನ್ನು ಕಟ್ಟಿಕೊಳ್ಳಬೇಕಾದರೆ ಇಂತಹ ಮಹನೀಯರ ಜೀವನದ ಮೌಲ್ಯಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ತಮ್ಮ ಕುಟುಂಬದ ಸದಸ್ಯರೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿಕೊಳ್ಳಬೇಕಿದೆ ಎಂಬುದಾಗಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ತಾಲ್ಲೂಕು ತಹಶೀಲ್ದಾರರಾದ ರಾಜೇಶ್ ಕುಮಾರ್, ತಾ.ಪಂ.ಕಾರ್ಯನಿರ್ವಹಣಾ ಅಧಿಕಾರಿ ಸತೀಶ್ ಕುಮಾರ್, ಸಮಾಜ

ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಜೆ.ದಿನೇಶ್, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿ.ಎಂ.ತಿಪ್ಪೇಸ್ವಾಮಿ, ನಗರಸಭೆ ಪೌರಾಯುಕ್ತರಾದ ವಾಸೀಂ, ನಗರಸಭೆ ಅಧ್ಯಕ್ಷರಾದ ಅಜಯ್ ಕುಮಾರ್, ಉಪಾಧ್ಯಕ್ಷರಾದ ಶ್ರೀಮತಿ ಅಂಬಿಕಾ ಆರಾಧ್ಯ, ನಗರಸಭೆ ಸದಸ್ಯರುಗಳಾದ ಅನಿಲ್ ಕುಮಾರ್, ಕವಿತಾಲೋಕೇಶ್, ಗಿರೀಶ್ ನಾಯಕ, ಜಿಲ್ಲಾ ಸಹಕಾರಿ ಬ್ಯಾಂಕ್ ನಿರ್ದೇಶಕ ಮಂಜುನಾಥ್ ಮಾಳಿಗೆ, ಸಮಾಜದ ಮುಖಂಡರುಗಳಾದ ನಾಗರಾಜ್ ಸೊಂಡೇಕೆರೆ, ದಿವಾಕರ್ ನಾಯಕ, ಎಸ್.ಜೋಗಪ್ಪ, ಬಸವರಾಜ್ ನಾಯಕ, ಮಸ್ಕಲ್ ಶ್ರೀನಿವಾಸ್, ತಾ.ಪಂ.ಮಾಜಿ ಅಧ್ಯಕ್ಷರುಗಳಾದ ಅಂಜಿನಪ್ಪ, ಚಂದ್ರಪ್ಪ, ಚಿತ್ರಲಿಂಗನಾಯಕ, ವಕೀಲರಾದ ಚಂದ್ರಪ್ಪ, ಯುವಮುಖಂಡ ಲೋಕೇಶ್ ಸಿ.ಎನ್. ಮಾಳಿಗೆ, ಸೇರಿದಂತೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

# ಯತಿ ನರಸಿಂಗಾನಂದ ಸರಸ್ವತಿ ಸ್ವಾಮೀಜಿ ಬಂಧಿಸುವಂತೆ ಮುಸ್ಲಿಂರಿಂದ ಪ್ರತಿಭಟನೆ

» ಚಿತ್ರದುರ್ಗ

ವಿಶ್ವಕ್ಕೆ ಶಾಂತಿಯ ಸಂದೇಶ ಸಾರಿದ ಪ್ರವಾದಿ ಮಹಮದ್ ಪೈಗಂಬರ್‌ರವರ ಬಗ್ಗೆ ಅವಹೇಳನವಾಗಿ ಮಾತನಾಡಿರುವ ಉತ್ತರಪ್ರದೇಶದ ಯತಿ ನರಸಿಂಗಾನಂದ ಸರಸ್ವತಿ ಸ್ವಾಮೀಜಿಯನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸುವಂತೆ ತೋಳಿಗೆ ಕಪ್ಪು ಪಟ್ಟಿ ಧರಿಸಿ ಮುಸ್ಲಿಂರು ನಗರದಲ್ಲಿ ಶುಕ್ರವಾರ ಬೃಹತ್ ಪ್ರತಿಭಟನೆ ನಡೆಸಿ ಉಪ ವಿಭಾಗಾಧಿಕಾರಿ ಮೂಲಕ ರಾಷ್ಟ್ರಪತಿ, ದೇಶದ ಪ್ರಧಾನಿ, ಗೃಹ ಸಚಿವ, ಅಲ್ಪಸಂಖ್ಯಾತ ಕಲ್ಯಾಣ ಸಚಿವ ಹಾಗೂ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.



ಶುಕ್ರವಾರ ಪ್ರಾರ್ಥನೆ ಮುಗಿಸಿಕೊಂಡು ಗಾಂಧಿವೃತ್ತದಿಂದ ಮೆರವಣಿಗೆ ಮೂಲಕ ಒನಕೆ ಓಬವ್ವ ವೃತ್ತಕ್ಕೆ ಆಗಮಿಸಿದ ಸಾವಿರಾರು ಮುಸ್ಲಿಂರು ಯತಿ ಸರಸಿಂಗಾನಂದ ಸರಸ್ವತಿ ಸ್ವಾಮೀಜಿ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಮುಸ್ಲಿಂ ಧರ್ಮಗುರು ಸೈಯದ್ ಅರಫಾಯಿ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಸರ್ವ ಜನಾಂಗದ ಶಾಂತಿಯ ತೋಟ ಭಾರತದಲ್ಲಿ ಹಿಂದೂ-ಮುಸಲ್ಮಾನರು ಸೌಹಾರ್ಧತೆಯಿಂದ ಬದುಕು ತ್ತಿದ್ದು, ಶಾಂತಿಯನ್ನು ಕದಡುವುದಕ್ಕಾಗಿ ಪ್ರವಾದಿ ಮಹಮದ್ ಪೈಗಂಬರ್‌ರವರನ್ನು ಕೀಳಾಗಿ ಮಾತನಾಡಿರುವ ಯತಿ ನರಸಿಂಗಾನಂದ ಸರಸ್ವತಿ ಸ್ವಾಮೀಜಿಯನ್ನು ಕೂಡಲೆ ಬಂಧಿಸಿ ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ದೇಶಾದ್ಯಂತ ಹೋರಾಟನಡೆಸಬೇಕಾಗುತ್ತದೆಂದು ಎಚ್ಚರಿಸಿದರು.

ಮತ್ತೊಬ್ಬ ಧರ್ಮಗುರು ಮೌಲಾನ ಗುಲಾಂ ಜಿಲಾನಿ ಮಾತನಾಡುತ್ತ ಸೂಫಿ ಸಂತರ ದೇಶ ಭಾರತದಲ್ಲಿ ಎಲ್ಲಾ ಧರ್ಮ, ಜಾತಿಯವರು ಅನ್ಯೋನ್ಯತೆಯಿಂದ ಬಾಳುತ್ತಿರುವುದನ್ನು ಸಹಿಸದ ಯತಿ ನರಸಿಂಗಾನಂದ ಸರಸ್ವತಿ ಸ್ವಾಮೀಜಿ ಅಖಂಡತೆಯನ್ನು ಹಾಳು ಮಾಡಲು ಹೊರಟಿದ್ದಾರೆ. ಕೋಮು ಸೌಹಾರ್ಧತೆಯನ್ನು ಕದಡಲು ನಾವುಗಳು ಬಿಡುವುದಿಲ್ಲ. ಪ್ರವಾದಿ ಮಹಮದ್ ಪೈಗಂಬರ್‌ರವರನ್ನು ಹಗುರವಾಗಿ ಮಾತನಾಡಿರುವ ನರಸಿಂಗಾನಂದ ಸರಸ್ವತಿ ಸ್ವಾಮಿಯನ್ನು ಬಂಧಿಸಿ ಉಗ್ರ ಶಿಕ್ಷೆ ವಿಧಿಸಿದಾಗ ಮಾತ್ರ ಇಂತಹ ಹೇಳಿಕೆಗಳು ನಿಲ್ಲತ್ತವೆ ಎಂದರು.

ಮುಸ್ಲಿಂ ಧರ್ಮಗುರು ಶಾಹಿದ್‌ರಜಾಫಕ್ರೆ ಆಲಂ ಪ್ರತಿಭಟನೆಯನ್ನುದ್ದೇಶಿಸಿ ಮಾತ ನಾಡುತ್ತ ಪ್ರವಾದಿರವರ ಬಗ್ಗೆ ಯತಿ ನರಸಿಂಗಾನಂದ ಸರಸ್ವತಿ ಸ್ವಾಮೀಜಿ ಹೀನಾಯವಾಗಿ ಮಾತನಾಡಿರುವುದು ಸಮಸ್ತ ಮಸ್ಲಿಂ ಬಾಂಧವರ ಮನಸ್ಸಿಗೆ ನೋವಾಗಿದೆ.

ಹಾಗಾಗಿ ಭಾರತ ಸರ್ಕಾರ ನರಸಿಂಗಾನಂದ ಸರಸ್ವತಿ ಸ್ವಾಮಿಯನ್ನು ಬಂಧಿಸಿ ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಜಾಮಿಯಾ ಮಸೀದಿ ಅಧ್ಯಕ್ಷ ಸಾಧಿಕ್‌ಭಾಷ, ಕಾರ್ಯದರ್ಶಿ ಮುಹಿಬುಲ್ಲಾ, ಸುಲ್ತಾನಿ ಜಾಮಿಯಾ ಮಸ್ಜಿದ್ ಮರ್ಕಜ್ ಎ ಅಹ್ಲೆ ಅಧ್ಯಕ್ಷ ನ್ಯಾಯವಾದಿ ಮಹಮದ್ ಸಾಧಿಕ್‌ವುಲ್ಲಾ, ಜಿಲ್ಲಾ ವಕ್ಫ್ ಮಂಡಳಿ ಚೇರ್ಮನ್ ಎಂ.ಸಿ.ಓ.ಬಾಬು, ಮುಸ್ಲಿಂ ವಕೀಲರ ಸಂಘದ ಅಧ್ಯಕ್ಷ ಮಹಮದ್ ಸಮೀವುಲ್ಲಾ, ನ್ಯಾಯವಾದಿ ಜುಲ್ಫಿಕರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಸೈಯದ್ ಖುದ್ದೂಸ್, ಸೈಯದ್ ಮೊಹಿದ್ದಿನ್, ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ, ಸೈಯದ್ ಇಸ್ಮಾಯಿಲ್, ನಗರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಮಹಮದ್ ಅಹಮದ್‌ಪಾಷ

ನೇಮತ್‌ವುಲ್ಲಾ, ಸೈಯದ್ ಅಫಾಖ್ ಅಹಮದ್, ನಗರಸಭೆ ಕೆಲವು ಸದಸ್ಯರು, ವಿವಿಧ ಮಸೀದಿಯ ಮುತುವಲ್ಲಿಗಳು, ಧರ್ಮಗುರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಯತಿ ನರಸಿಂಗಾನಂದ ಸರಸ್ವತಿ ಸ್ವಾಮೀಜಿ ವಿರುದ್ದ ಎಫ್.ಐ.ಆರ್. ದಾಖಲಿಸುವಂತೆ ನಗರ ಠಾಣೆ ಇನ್ಸ್‌ಪೆಕ್ಟರ್‌ಗೆ ಪ್ರತಿಭಟನಾಕಾರರು ದೂರು ನೀಡಿದರು.

## ವಿನಾಯಕ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟಿಸಿದ ಶಾಸಕ ವೀರೇಂದ್ರ ಪಪ್ಪಿ



» ಚಿತ್ರದುರ್ಗ

ಸಾಮಾಜಿಕ ಕಳಕಳಿಯುಳ್ಳವರು ಸಂಘದಲ್ಲಿದ್ದಾಗ ಮಾತ್ರ ಬಲಿಷ್ಟವಾಗಿ ಮುನ್ನಡೆಸಿಕೊಂಡು ಹೋಗಬಹುದು ಎಂದು ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಹೇಳಿದರು.ಮೆದೇಹಳ್ಳಿ ರಸ್ತೆ, ಮಾರುತಿ ನಗರದಲ್ಲಿ ಶುಕ್ರವಾರ ವಿನಾಯಕ ಕ್ಷೇಮಾಭಿವೃದ್ದಿ ಸಂಘವನ್ನು ಉದ್ಘಾಟಿಸಿ ಮಾತನಾಡಿದರು.

ಯಾವುದೇ ಒಂದು ಸಂಘವನ್ನು ಕಟ್ಟುವುದು ಕಷ್ಟ. ಸಂಘ ಕಟ್ಟಿದ ನಂತರ ಎಲ್ಲರನ್ನು ಜೊತೆಗೆ ತೆಗೆದುಕೊಂಡು ಹೋಗುವುದು ಇನ್ನು ಕಷ್ಟದ ಕೆಲಸ. ಸಂಘ ಬಲಿಷ್ಟವಾಗಿರಬೇಕಾದರೆ ಒಡಕಾಗದಂತೆ ಎಚ್ಚರ ವಹಿಸುವುದು ಮುಖ್ಯ. ಮಾರುತಿ ನಗರದ ಅಭಿವೃದ್ದಿ ಸೇರಿದಂತೆ ಇಡಿ ಚಿತ್ರದುರ್ಗ ನಗರವನ್ನು ಅಭಿವೃದ್ದಿಪಡಿಸಿ ಸ್ವಚ್ಚವಾಗಿಟ್ಟುಕೊಳ್ಳಬೇಕಾಗಿದೆ. ಸಾಮಾಜಿಕ ಕಾರ್ಯಗಳಿಗೆ ಸ್ವಯಂ ಸೇವಕರ ಅಗತ್ಯವಿದೆ. ನಗರದ 35 ವಾರ್ಡ್‌ಗಳಲ್ಲಿಯೂ ಹೈಮಾಸ್ ದೀಪ ಅಳವಡಿಕೆಗೆ ಸರ್ಕಾರದಿಂದ ಹಣ ಮಂಜೂರಾಗಿದೆ. ಮುಂದಿನ ದಿನಗಳಲ್ಲಿ ಕೆಲಸ ಕೈಗೆತ್ತಿಕೊಳ್ಳಲಾವುದು ಎಂದರು.ನಗರಸಭೆ ಮಾಜಿ ಸದಸ್ಯ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಟಿ.ರಮೇಶ್ ಮಾತನಾಡಿ ಮಾರುತಿ ನಗರದಲ್ಲಿ ಸಂಘ ಉದ್ಘಾಟನೆಯಾಗಿದೆ ಎಂದರೆ ವಾರ್ಡ್‌ಗೆ ಶಕ್ತಿ ಬಂದಂತೆ. ಇಲ್ಲಿ ಏನಾದರೂ ಸಮಸ್ಯೆಗಳು ಎದುರಾದಾಗ ಸಂಘದ ಮೂಲಕ ಬಗೆಹರಿಸಿಕೊಳ್ಳಲು ಸಹಾಯವಾಗಲಿದೆ. ಪ್ರತಿಯೊಬ್ಬರ ಸಮಸ್ಯೆಗಳನ್ನು ಸಮಾಧಾನದಿಂದ ಆಲಿಸುವ ಶಾಸಕರು ನಮಗೆ ಸಿಕ್ಕಿದ್ದಾರೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿನಾಯಕ ಕ್ಷೇಮಾಭಿವೃದ್ದಿ ಸಂಘದ ಅಧ್ಯಕ್ಷ ಎ.ಎನ್.ತಿರುಮಲಯ್ಯ, ಗೌರವಾಧ್ಯಕ್ಷ ದಿನೇಶ್ ಡಿ. ಉಪಾಧ್ಯಕ್ಷರುಗಳಾದ ನೂರುಲ್ಲಾ ಜಿ.ಬಿ. ವೆಂಕಟೇಶ್‌ರೆಡ್ಡಿ ಎಂ.ಆರ್.ಕಾರ್ಯದರ್ಶಿ ವೆಂಕಟೇಶ್ ಎನ್. ಜಂಟಿ ಕಾರ್ಯದರ್ಶಿ ವಿನಾಯಕ ಕೆ.ಎಂ. ಸಂಘಟನಾ ಕಾರ್ಯದರ್ಶಿ ರಾಮಾಂಜನೇಯ, ಖಜಾಂಚಿ ನಾಗರಾಜ್ ಕೆ.ಎಸ್. ನಗರಸಭೆ ಅಧ್ಯಕ್ಷೆ ಶ್ರೀಮತಿ ಸುಮಿತ, ಉಪಾಧ್ಯಕ್ಷೆ ಶ್ರೀಮತಿ ಶ್ರೀದೇವಿ ಚಕ್ರವರ್ತಿ, ಮಾಜಿ ಅಧ್ಯಕ್ಷೆ ಶ್ರೀಮತಿ ತಿಪ್ಪಮ್ಮವೆಂಕಟೇಶ್, ನಗರಸಭೆ ಸದಸ್ಯರುಗಳಾದ ಶ್ರೀಮತಿ ಎಂ.ಪಿ.ಅನಿತಟಿ.ರಮೇಶ್, ವೆಂಕಟೇಶ್, ಕೆ.ಬಿ.ಸುರೇಶ್, ಮೆದೇಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವಿಜಯಕುಮಾರ್, ನಗರಸಭೆ ಪೌರಾಯುಕ್ತೆ ಶ್ರೀಮತಿ ರೇಣುಕ ಸೇರಿದಂತೆ ವಿನಾಯಕ ಕ್ಷೇಮಾಭಿವೃದ್ದಿ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ' ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತ್ತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿಸಲ್ಲಿಸಬೇಕು. ತರಬೇತಿಯ ಅವಧಿ ವೇಳೆ ಮಾಹೆಯಾನ 15,000/- ರೂ. ಗಳ ಸ್ಟೈಫೆಂಡ್ ನೀಡಲಾಗುವುದು. ತರಬೇತಿಯು 2025 ರ ಜನವರಿಯಿಂದ ಡಿಸೆಂಬರ್ ವರೆಗೆ 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ. ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ. ತರಬೇತಿ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದುರುಗಿಸುವುದಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು. ಅರ್ಜಿ ಸಲ್ಲಿಸಲು ನವೆಂಬರ್ 08 ಕೊನೆಯ ದಿನವಾಗಿದ್ದು, ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ತುಕಾರಾಂರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಯಾತ್ರಿ ನಿವಾಸ ಹಸ್ತಾಂತರ: ಅರ್ಜಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ವಾಣಿವಿಲಾಸ ಸಾಗರ ಮಾರಿಕಾಂಬ ದೇವಸ್ಥಾನದ ಮುಂಭಾಗದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ರೂ.5 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಯಾತ್ರಿನಿವಾಸ, ಉದ್ಯಾನವನಗಳ ಜೊತೆಗೆ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಈ ಕಟ್ಟಡಗಳನ್ನು ಖಾಸಗಿ ಸಂಸ್ಥೆಗಳು ಹಸ್ತಾಂತರಿಸಿಕೊಳ್ಳಲು ಇಚ್ಚಿಸಿದ್ದಲ್ಲಿ, ಪ್ರವಾಸೋದ್ಯಮ ಇಲಾಖೆಗೆ "ಆಸಕ್ತಿಯ ಅಭಿವ್ಯಕ್ತ" Expression of Interest (EOI) ಸಲ್ಲಿಸುವಂತೆ ಸೆಪ್ಟೆಂಬರ್-2024ರ ಮಾಹೆಯ ಮೊದಲ ವಾರದಲ್ಲಿ ಅರ್ಜಿ ಸಲ್ಲಿಸುವಂತೆ ಕೋರಲಾಗಿರುತ್ತದೆ. ಆದರೆ ಇಲ್ಲಿಯವರೆಗೂ ಯಾವುದೇ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ. ಹಾಗಾಗಿ ಅರ್ಜಿ ಸಲ್ಲಿಕೆ ಅವಧಿಯನ್ನು 2024ರ ನವೆಂಬರ್ 11 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಕಾಮನಬಾವಿ ಬಡಾವಣೆ, ಕೋಟೆ ಸಮೀಪದ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಜಯ ಕರ್ನಾಟಕ ಸಂಘಟನೆ ತಾಲೂಕು ಅಧ್ಯಕ್ಷ ಪಾಪಣ್ಣ ನಿಧನ

» ಹಿರಿಯೂರು



ಜಯ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡ ಹುಚ್ಚವ್ವನಹಳ್ಳಿ ಪಾಪಣ್ಣ ( 48 ) ಅನಾರೋಗ್ಯದಿಂದ ಗುರುವಾರ ರಾತ್ರಿ11 ಗಂಟೆಗೆ ದಾವಣಗೆರೆಯ ಬಾಪೂಜಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ನಿಧನ ಹೊಂದಿದ್ದಾರೆ. ಮೃತರು ಪತ್ನಿ ಮತ್ತು ಇಬ್ಬರು ಪುತ್ರರು, ಒರ್ವ ಪುತ್ರಿ ಹಾಗೂ ಅಪಾರ ಬಂಧು ಬಳಗ ಮತ್ತು ಸ್ನೇಹಿತರನ್ನು ಅಗಲಿದ್ದಾರೆ. ಹುಚ್ಚವ್ವನಹಳ್ಳಿಯ ಉಪ್ಪಾರಹಟ್ಟಿ ಬಳಿಯಿರುವ ಅವರ ತೋಟದಲ್ಲಿ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಪ್ರಮುಖ ಸುದ್ದಿ**

### ಸರ್ಕಾರಿ ಕೈಗಾರಿಕ ತರಬೇತಿ ಕೇಂದ್ರ: ವಿಶ್ವಮಾನಸಿಕ ಆರೋಗ್ಯ ದಿನಾಚರಣೆ

# ಮಾದಕ ವಸ್ತುಗಳ ಸೇವನೆಯಿಂದ ಮಾನಸಿಕ ಕಾಯಿಲೆ

» ಚಳ್ಳಕೆರೆ

ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಆರೋಗ್ಯವನ್ನು ಕಾಪಾಡಿಕೊಳ್ಳು ಹೆಚ್ಚು ಗಮನಹರಿಸಬೇಕಿದೆ. ಯಾವುದೇ ವ್ಯಕ್ತಿ ಹುಟ್ಟಿದ ಕೂಡಲೇ ಮಾನಸಿಕ ಕಾಯಿಲೆಗೆ ತುತ್ತಾಗುವುದಿಲ್ಲ. ಬದಲಾಗಿ ಹಲವಾರು ಸಮಸ್ಯೆಗಳಿಗೆ ಈಡಾಗಿ ಚಿಂತನೆ ಮಾಡುವುದು, ಸರಿಯಾಗಿ ಆಹಾರ ಸೇವಿಸದೆ ಇರುವುದು. ದುಶ್ಚಟಗಳಿಗೆ ದಾಸನಾಗುವುದು, ಮಾದಕವಸ್ತುಗಳನ್ನು ಸೇವನೆ ಮಾಡುವುದರಿಂದ ಮಾನಸಿಕ ರೋಗಿಯಾಗಿ ಪರಿರ್ತನೆಯಾಗುತ್ತಾನೆ. ಆದ್ದರಿಂದ ವಿದ್ಯಾರ್ಥಿಗಳು ಎಲ್ಲಾ ಹಂತದಲ್ಲೂ ಮುಂಜಾಗ್ರತೆ ವಹಿಸಬೇಕೆಂದು ಜಿಲ್ಲಾ ಕುಷ್ಟರೋಗ ನಿಯಂತ್ರಣಾಧಿಕಾರಿ ನಾಗರಾಜು ತಿಳಿಸಿದರು.



ಅವರು, ಶುಕ್ರವಾರ ನಗರದ ಸರ್ಕಾರಿ ಕೈಗಾರಿಕ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ವಿಶ್ವಮಾನಸಿಕ ಆರೋಗ್ಯ ಕಾರ್ಯಕ್ರಮವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ತಾವು ಜಾಗೃತರಾಗುವುದಲ್ಲದೆ, ಎಲ್ಲರನ್ನೂ ಜಾಗೃತಿಗೊಳಿಸುವ ಕಾರ್ಯವನ್ನು ಮಾಡಬೇಕಿದೆ. ಮದ್ಯಪಾನ, ಧೂಮಪಾನ ಚಟಗಳಿಂದ ದೂರವಿರುವಂತೆ ಮಾರ್ಗದರ್ಶನ ನೀಡಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಬಸಣ್ಣ ಮಾತನಾಡಿ, ನಮ್ಮ ಕೈಗಾರಿಕ ತರಬೇತಿ ಕೇಂದ್ರದಲ್ಲಿ ವಿಶ್ವಮಾನಸಿಕ ಆರೋಗ್ಯ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಮಾನಸಿಕ ಕಿನ್ನತೆಯಿಂದ ದೂರವಿರುವ ಬಗ್ಗೆ ಹಲವಾರು ಉಪಯುಕ್ತ ಮಾಹಿತಿ ಪಡೆದುಕೊಳ್ಳಲಾಗಿದೆ. ಯಾವುದೇ ವ್ಯಕ್ತಿ ಮಾನಸಿಕ ಕಿನ್ನತೆಗೆ ಒಳಗಾದಲ್ಲಿ ಸರ್ವಸ್ವವನ್ನು ಕಳೆದುಕೊಳ್ಳುತ್ತಾನೆ. ಸಮಾಜವೂ ಸಹ ಆತನನ್ನು ವಿಭಿನ್ನವಾಗಿ ನೋಡುತ್ತದೆ. ಆದ್ದರಿಂದ ಇಂತಹ ಕಾಯಿಲೆಯಿಂದದೂರವಿದ್ದು ಜಾಗೃತರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಅಧಿಕಾರಿ ಶ್ರೀಧರ್, ರಶ್ಮಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟೇಶ್,ಸಂಜಯ್, ಉಪನ್ಯಾಸಕರಾದ ಮಂಜುನಾಥ, ಸತ್ಯಣ್ಣ, ಲಾವಣ್ಯ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮಿತಿಮೀರಿದ ಮದ್ಯಪಾನ ಮಾಡಿ ಮೃತಪಟ್ಟ ಮದ್ಯವೆಸನಿ

» **ಚಳ್ಳಕೆರೆ**

ಪ್ರತಿನಿತ್ಯವೂ ಮದ್ಯಪಾನ ಮಾಡುವ ಹವ್ಯಾಸವನ್ನು ಬೆಳೆಸಿಕೊಂಡಿದ್ದ ಮದಕರಿನಗರದ ತಿಪ್ಪೇಸ್ವಾಮಿ(25) ಎಂಬ ವ್ಯಕ್ತಿ ತನ್ನ ಮನೆಯಲ್ಲೇ ಕುಡಿದು ಯಾವುದೇ ಆಹಾರ ಸೇವಿಸದ ಹಿನ್ನೆಲೆಯಲ್ಲಿ ಮೃತಪಟ್ಟಿರುತ್ತಾನೆ. ಮೃತನ ತಾಯಿ ಕಣುಮಕ್ಕ ಪೊಲೀಸರಿಗೆ ನೀಡಿದ ದೂರಿನಲ್ಲಿ ನನ್ನ ಮಗ ತಿಪ್ಪೇಸ್ವಾಮಿ ಜಳೆದ ಹಲವಾರು ವರ್ಷಗಳಿಂದ ವಿಪರೀತ ಮದ್ಯಪಾನ ಮಾಡುವ ಚಟರೂಢಿಸಿಕೊಂಡಿದ್ದು, ಮದ್ಯಪಾನ ಮಾಡಿ ಆಹಾರ ಸೇವಿಸದ ಹಿನ್ನೆಲೆಯಲ್ಲಿ ಮೃತಪಟ್ಟಿರುತ್ತಾನೆ. ಸಾವಿನಲ್ಲಿ ಯಾವುದೇ ಅನುಮಾನವಿಲ್ಲವೆಂದು ದೂರುನೀಡಿದ್ದು ಎಎಸ್‌ಐ ಜಿ.ಎನ್.ಮಂಜುನಾಥ ಪ್ರಕರಣ ದಾಖಲಿಸಿದ್ದಾರೆ.

### ಕಾಣೆ : ಪತ್ತೆಗೆ ಮನವಿ

» **ಚಿತ್ರದುರ್ಗ**

ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಚಿತ್ರಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮೂವರು ಮಹಿಳೆಯರು ಕಾಣೆಯಾದ ಕುರಿತು ಮೂರು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.



ಹೊಳಲ್ಕೆರೆ ತಾಲ್ಲೂಕಿನ ತೇಕಲವಟ್ಟಿ ಗೊಲ್ಲರಹಟ್ಟಿ ಗ್ರಾಮದ ರೇಣುಕಮ್ಮ ಗಂಡ ಕರಿಯಪ್ಪ (ಸು.21 ವರ್ಷ) ಎಂಬ ಯುವತಿ ಕಾಣೆಯಾದ ಕುರಿತು ಸೆ.19ರಂದು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ರೇಣುಕಮ್ಮ ಸು.5 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಬಿಳಿ ಮಿಶ್ರಿತ ಬೂದು ಬಣ್ಣದ ನೈಟಿ ಧರಿಸಿರುತ್ತಾರೆ. ಹೊಳಲ್ಕೆರೆ ತಾಲ್ಲೂಕಿನ ನಂದನ ಹೊಸೂರು ಗ್ರಾಮದ ನಿವಾಸಿ ವಿಜಯಮ್ಮ ಗಂಡ ಚಿತ್ರಶೇಖರ (ಸು.35ವರ್ಷ) ಸೆ.19ರಂದು ಕಾಣೆಯಾದ



ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವಿಜಯಮ್ಮ 5 ಅಡಿ ಎತ್ತರ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಬಲಗಣ್ಣು ಚಿಕ್ಕದಾಗಿದ್ದು, ಕಣ್ಣಿನಲ್ಲಿ ಬಿಳಿ ಹೂ ಇರುತ್ತದೆ. ಮನೆಯಿಂದ ಹೋಗುವಾಗ ಕಪ್ಪು ಬಣ್ಣದ ನೈಟಿ ಧರಿಸಿರುತ್ತಾಳೆ. ಹೊಳಲ್ಕೆರೆ ತಾಲ್ಲೂಕಿನ ತೊಡರನಾಳ್ ಗ್ರಾಮದ ದೀಪಾ ತಂದೆ ಪ್ರಕಾಶ್ (20ವರ್ಷ) ಯುವತಿ



ಸೆ.22ರಂದು ಕಾಣೆಯಾದ ಕುರಿತು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ದೀಪಾ 5.2 ಅಡಿ ಎತ್ತರ, ಕೋಲು ಮುಖ, ಕಪ್ಪುಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಮತ್ತು ಇಂಗ್ಲೀಷ್ ಮಾತನಾಡುವರು. ಮನೆಯಿಂದ ಹೋಗುವಾಗ ಹಸಿರು ಬಣ್ಣದ ಚೂಡಿದಾರದ ಟಾಪ್. ಅರಿಶಿಣ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಕಾಣೆಯಾದವರ ಕುರಿತು ಮಾಹಿತಿ ಕಂಡುಬಂದಲ್ಲಿ ಹೊಳಲ್ಕೆರೆ ತಾಲ್ಲೂಕು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಸಹಾಯಕ ಪೊಲೀಸ್ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಕೆ.ಎಸ್.ಆರ್.ಟಿ.ಸಿ. ಬಸ್ ಬೈಕ್‌ಗೆ ಡಿಕ್ಕಿ ಓರ್ವ ಸಾವು

» **ಹೊಸದುರ್ಗ**

ಕೆ.ಎಸ್.ಆರ್.ಟಿ.ಸಿ. ಬಸ್ಸೊಂದು ಬೈಕ್ ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲೂಕಿನ ಹೊಸಗೊಲ್ಲರಹಟ್ಟಿ ಗೇಟ್ ಸಮೀಪ ನೆಡೆದಿದೆ. ಮೃತ ವ್ಯಕ್ತಿಯನ್ನು ಮತ್ತೋಡು ಹೋಬಳಿಯ ಹೊಸಗೊಲ್ಲರಹಟ್ಟಿ ಗ್ರಾಮದ ಚಿಕ್ಕಣ್ಣ (41) ಎಂದು ಗುರುತಿಸಲಾಗಿದ್ದು ಕಂಚೀಪುರ ಗ್ರಾಮದ ಕಡೆಯಿಂದ ಬರುತ್ತಿದ್ದ ಕೆ.ಎಸ್.ಆರ್.ಟಿ.ಸಿ. ಬ[illegible] ಹೊಸಗೊಲ್ಲರಹಟ್ಟಿ ಗೇಟ್ ಸಮೀಪ ಬರುತ್ತಿದ್ದ ಬೈಕ್ ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಬೈಕ್ ಸವಾರ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ. ಘಟನೆ ಸಂಬಂಧ ಶ್ರೀರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**



ಜಲಸಿರಿ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಅ.19 ರಂದು ಬೆಳಿಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಕೆ.ಟಿ.ಜೆ ನಗರ ಫೀಡರ್ ವ್ಯಾಪ್ತಿಯ ಕೆ.ಟಿ.ಜೆ. ನಗರ 1 ರಿಂದ 18ನೇ ಕ್ರಾಸ್, ಶಿವಪ್ಪ ಸರ್ಕಲ್, ಸಿದ್ದಮ್ಮ ಪಾರ್ಕ್ ಸುತ್ತಮುತ್ತಲಿನ ಪ್ರದೇಶ, ವಿದ್ಯಾರ್ಥಿ ಭವನ ವೃತ, ಡಾಂಗೇ ಪಾರ್ಕ್, ಭಗತ್ ಸಿಂಗ್ ನಗರ, ಲೇಬರ್ ಕಾಲೋನಿ, ಹದಡಿ ರೋಡ್, ಮುರಗರಾಜೇಂದ್ರ ಮಠ, ಕೆಬಿ ಬಡಾವಣೆ, ತ್ರಿಶೂಲ್ ಕಲಾಭವನ, ತ್ರಿಶೂಲ್ ರಸ್ತೆ, ಆರೈಕೆ ಆಸ್ಪತ್ರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

---

**ವಿಧಾನ ಮಂಡಲ ಅನುಸೂಚಿತ ಜಾತಿ, ಪಂಗಡಗಳ ಕಲ್ಯಾಣ ಸಮಿತಿ ಸಭೆ**

### ತಳಸಮುದಾಯದಲ್ಲಿನ ಸಾಮಾಜಿಕ ಪಿಡುಗು ನಿರ್ಮೂಲನೆ ಜೊತೆಗೆ

# ಅಶಕ್ತರಿಗೆ ನೆರವಾಗುವ ಮನೋಭಾವ ಅಧಿಕಾರಿಗಳಲ್ಲಿ ಮೂಡಬೇಕಿದೆ; ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಸಲಹೆ

» **ದಾವಣಗೆರೆ**

ತಳಸಮುದಾಯದಲ್ಲಿ ಅಜ್ಞಾನದಿಂದ ಮೂಡನಂಬಿಕೆಗಳಿಗೆ ಕಟ್ಟುಬಿದ್ದು ಸಾಮಾಜಿಕ ಪಿಡುಗುಗಳ ಆಚರಣೆಯಲ್ಲಿ ತೊಡಗಿದವರಿಗೆ ಜಾಗೃತಿ ಮೂಡಿಸುವ ಜೊತೆಗೆ ಅಶಕ್ತರಿಗೆ ನೆರವಾಗುವ ಮೂಲಕ ಸಮ ಸಮಾಜ ನಿರ್ಮಾಣ, ಪ್ರಜಾಪ್ರಭುತ್ವದಲ್ಲಿ ಸಂವಿಧಾನದ ಆಶಯಗಳನ್ನು ಈಡೇರಿಸುವಲ್ಲಿ ಅಧಿಕಾರಿ ವರ್ಗದವರು ತಮ್ಮ ಬದ್ದತೆಯನ್ನು ಪ್ರದರ್ಶಿಸಬೇಕೆಂದು ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿಯವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅವರು ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರ ಅನುಸೂಚಿತ ಜಾತಿ ಮತ್ತು ಪಂಗಡಗಳ ಜನಾಂಗದವರ ಅಭಿವೃದ್ದಿಗಾಗಿ 2013 ರ ಕಾಯ್ದೆಯನ್ನು ಜಾರಿಗೊಳಿಸುವಮೂಲಕಅನುದಾನವನ್ನು ಪ್ರತ್ಯೇಕವಾಗಿ ಮೀಸಲಿರಿಸಲಾಗುತ್ತಿದೆ. ಮೀಸಲಿರಿಸಿದ ಅನುದಾನವನ್ನು ಈ ಜನಾಂಗದ ಅಭಿವೃದ್ಧಿಗಾಗಿಯೇ ವೆಚ್ಚ ಮಾಡಬೇಕೆಂದು ಕಾಯಿದೆಯಲ್ಲಿದೆ. ಪರಿಶಿಷ್ಠರ ಅನುದಾನದ ಮೂಲಕ ಎಸ್‌ಸಿ, ಎಸ್‌ಟಿ ಜನರ ಜೀವನ ಮಟ್ಟ ಸುಧಾರಣೆ, ಶೈಕ್ಷಣಿಕ ಅಭಿವೃದ್ಧಿ, ಸಾಮಾಜಿಕ ಪಿಡುಗಗಳ ನಿವಾರಣೆ ಜೊತೆಗೆ ಅವರಿಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಬೇಕೆಂದು ಸೂಚನೆ ನೀಡಿದರು.

ಟೆಂಡರ್‌ನಲ್ಲಿ ಪ್ಯಾಕೇಜ್ ಸಲ್ಲದು; ಎಲ್ಲಾ ಅನುಷ್ಠಾನ ಇಲಾಖೆಯಲ್ಲಿ ಕಾಮಗಾರಿ, ಸೇವಾ ಟೆಂಡರ್‌ಗಳನ್ನು ಕರೆಯುವಾಗ ರೂ.1 ಕೋಟಿ ಒಳಗಿನ ಮೊತ್ತದ ಕಾಮಗಾರಿಗೆ ಮೀಸಲಾತಿಯನ್ನು ನೀಡುವುದು ಕಡ್ಡಾಯವಾಗಿದೆ. ಆದರೆ ಕೆಲವು ಇಲಾಖೆಗಳಲ್ಲಿ ಮೀಸಲಾತಿ ನೀಡುವ ಬದಲಾಗಿ ಪ್ಯಾಕೇಜ್ ಮೂಲಕ ಹಲವು ಕಾಮಗಾರಿಗಳನ್ನು ಒಂದರಲ್ಲಿ ಸೇರಿಸಿ ಕರೆಯಲಾಗುತ್ತಿದೆ. ಆದರೆ ಕಾಯ್ದೆಯನ್ವಯ ಇದು ತಪ್ಪಾಗಿದ್ದು ಅಂತಹ ಇಂಜಿನಿಯರ್‌ಗಳ ಮೇಲೆ ಮೊಕದ್ದೊಮೆ ದಾಖಲಿಸಲಾಗುತ್ತದೆ ಎಂದರು.

ಸ್ಮಶಾನಕ್ಕೆ ಜಾಗ ಮೀಸಲಿರಿಸಲು ಸೂಚನೆ; ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ಸ್ಮಶಾನ ಜಾಗವು ಇರಬೇಕು, ಇಲ್ಲಿ ಎಲ್ಲಾ ಜಾತಿ,ಜನಾಂಗದವರಿಗೂ ಅವಕಾಶ ಇದ್ದಲ್ಲಿ ಯಾವುದೇ ಸಮಸ್ಯೆ ಇಲ್ಲ, ಆದರೆ ಪ.ಜಾತಿ ಮತ್ತು ಪಂಗಡದವರಿಗೆ ಶವಸಂಸ್ಕಾರಕ್ಕೆ ಜಾಗ ನೀಡದಿದ್ದಲ್ಲಿ ಸರ್ಕಾರಿ ಜಾಗ ಅಥವಾ ಖಾಸಗಿ ಜಾಗವನ್ನು ಖರೀದಿಸಿ ಸ್ಮಶಾನಕ್ಕೆ ಮೀಸಲಿರಿಸಲು ಸೂಚನೆ ನೀಡಿದರು. ಈ ವೇಳೆ ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪನವರು ಮಾತನಾಡಿ ಪರಿಶಿಷ್ಟರು ಜಾಗವಿಲ್ಲದೇ ರಸ್ತೆ ಬದಿಯಲ್ಲಿ ಶವಸಂಸ್ಕಾರ ಮಾಡುವಂತ ನಿದರ್ಶನಗಳನ್ನು ಕಾಣಲಾಗಿದೆ ಎಂದಾಗ ಇಂತಹ ಗ್ರಾಮಗಳನ್ನು ಪಟ್ಟಿ ಮಾಡಿ ಕೂಡಲೇ ಸ್ಮಶಾನಕ್ಕೆ ಜಾಗ ಗುರುತಿಸಲು ಸೂಚನೆ ನೀಡಿದರು.

ದೇವದಾಸಿ ಪದ್ದತಿ ಸಂಪೂರ್ಣ ನಿರ್ಮೂಲನೆಗೆ ಸೂಚನೆ; ದೇವದಾಸಿ ಪದ್ಧತಿ ಇದು ಅನಿಷ್ಟ ಸಾಮಾಜಿಕ ಪಿಡುಗಾಗಿದ್ದು ಇದು ಸಮಾಜದಿಂದ ನಿರ್ಮೂಲನೆಯಾಗಬೇಕಾಗಿದೆ. ಇಂತಹ ಪದ್ದತಿ ಎಂದಿಗೂ ಆಚರಣೆಯಲ್ಲಿರಬಾರದು. ಇನ್ನೂ ಕೆಲ ತಳಸಮುದಾಯದಲ್ಲಿ ಮುತ್ತುಕಟ್ಟುವ ಪದ್ದತಿ ಜಾರಿಯಲ್ಲಿದೆ ಎಂಬ ಮಾಹಿತಿ ಇದ್ದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಈ ಬಗ್ಗೆ ಮಹಿಳೆಯರು, ಸಾರ್ವಜನಿಕರಲ್ಲಿ ಕಟ್ಟುನಿಟ್ಟಿನ ಜಾಗೃತಿ ಮೂಡಿಸಬೇಕು. ಮತ್ತು ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಪೊಲೀಸ್ ಇಲಾಖೆಯಿಂದ ಈ ಅನಿಷ್ಟ ಪದ್ಧತಿ ಸಮಾಜದಿಂದಲೇ ನಿರ್ಮೂಲನೆಯಾಗುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದಾಗ ಈ ಪದ್ದತಿ ನಿರ್ಮೂಲನೆಗೆ ಜಿಲ್ಲಾಡಳಿತದಿಂದ ಎಲ್ಲಾ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಸರ್ಕಾರಿ ಶಾಲೆಗಳ ಶಿಕ್ಷಣಕ್ಕೆ ಒತ್ತು; ಜಿಲ್ಲೆಯಲ್ಲಿನ ಗ್ರಾಮೀಣ ಭಾಗದಲ್ಲಿನ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವವರಲ್ಲಿ ತಳಸಮುದಾಯದ ಮಕ್ಕಳೆ ಆಗಿದ್ದು ಇಲ್ಲಿನ ಶಾಲೆಗಳ ಮೂಲಭೂತ ಸೌಕರ್ಯ ಹೆಚ್ಚಳದ ಬಗ್ಗೆ ಮತ್ತು ಸ್ಮಾರ್ಟ್ ಕ್ಲಾಸ್‌ಗಳನ್ನು ನಡೆಸಲು ಸಿಎಸ್‌ಆರ್ ನಿಧಿಯಡಿ ಅಭಿವೃದ್ಧಿ ಕೈಗೊಂಡು ಇಸ್ರೋ ಸಂಸ್ಥೆಯ ಒಡಂಬಡಿಕೆಯಡಿ ಆನ್‌ಲೈನ್ ಕ್ಲಾಸ್ ಕೊಡಿಸಲು ತಿಳಿಸಿ ನನ್ನ ಕ್ಷೇತ್ರದಲ್ಲಿ ಎಲ್ಲಾ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಟ್ಯಾಬ್ ನೀಡಿದ್ದು ಸ್ಮಾರ್ಟ್ ಕ್ಲಾಸ್‌ಗಳನ್ನು ನಡೆಸಲಾಗುತ್ತಿದೆ. ಇದೇ ಮಾದರಿಯಲ್ಲಿ ಬಡವರು, ಹಿಂದುಳಿದವರ ಮಕ್ಕಳ ಶಿಕ್ಷಣಕ್ಕೆ ನೆರವಾಗಬೇಕೆಂದು ತಿಳಿಸಿದರು.

ಯಾವುದೇ ಖಾಸಗಿ ಶಾಲೆ, ಕಾಲೇಜಾಗಿರಲಿ ಪ.ಜಾತಿ, ಪ.ಪಂಗಡದ ವಿದ್ಯಾರ್ಥಿಗಳನ್ನು ಪ್ರವೇಶದ ವೇಳೆ ಶುಲ್ಕ ಕಟ್ಟಿಲ್ಲ ಎಂದಾಗ ಶಾಲಾ, ಕಾಲೇಜಿನಿಂದ ಹೊರಗಿಡಬಾರದು ಮತ್ತು ಪ್ರವೇಶ ನಿರಾಕರಿಸುವಂತಿಲ್ಲ. ಸರ್ಕಾರದಿಂದ ಶುಲ್ಕ ಮರುಪಾವತಿಯನ್ನು ಮಾಡಲಾಗುತ್ತದೆ. ಇಂತಹ ಪ್ರಕರಣಗಳು ಕಂಡುಬಂದಾಗ ಮುಂದಿನ ದಿನಗಳಲ್ಲಿ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನದ ಮೂಲಕ ಪ್ರಕರಣಗಳನ್ನು ನೇರವಾಗಿ ದಾಖಲಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿ ಶಾಲಾ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ಇದರ ಬಗ್ಗೆ ಗಮನಿಸಲು ಸೂಚನೆ ನೀಡಿದರು.

ಬಾಲಕಿಯರ ಹಾಸ್ಟೆಲ್‌ನಲ್ಲಿ ಮಹಿಳಾ ವಾರ್ಡನ್ ಕಡ್ಡಾಯ; ಯಾವುದೇ ವಸತಿ ಶಾಲೆಯಾಗಲಿ, ಹಾಸ್ಟೆಲ್ ಆಗಲಿ ಮೆಟ್ರಿಕ್ ಪೂರ್ವ ಹಾಗೂ ನಂತರದ ಹಾಸ್ಟೆಲ್‌ಗಳಲ್ಲಿ ಮಹಿಳಾ ವಾರ್ಡನ್ ಕಡ್ಡಾಯವಾಗಿರಬೇಕು. ಬಾಲಕಿಯರೇ ಇರುವ ಯಾವ ವಿದ್ಯಾರ್ಥಿನಿಲಯದಲ್ಲಿ ಮಹಿಳಾ ವಾರ್ಡನ್ ಬದಲಾಗಿ ಪುರುಷ ವಾರ್ಡನ್ ಇದ್ದಲ್ಲಿ ಅಂತಹ ಇಲಾಖೆ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಜರುಗಿಸಲಾಗುತ್ತದೆ ಎಂದು ಎಲ್ಲಾ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂಗನವಾಡಿ ಕೇಂದ್ರಗಳ ಆಹಾರ ಗುಣಮಟ್ಟ ಕಾಪಾಡಲು ಸೂಚನೆ; ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ನೀಡಲಾಗುವ ಆಹಾರದ ಗುಣಮಟ್ಟ ಕಡಿಮೆ ಇರುತ್ತದೆ ಎಂಬ ದೂರುಗಳಿದ್ದು ಅಂಗನವಾಡಿಗೆ ಬರುವ ಮಕ್ಕಳೇ ಬಡವರ ಮಕ್ಕಳಾಗಿದ್ದು ಇವರ ಪೌಷ್ಟಿಕತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಗುಣಮಟ್ಟ ಕಾಪಾಡಿಕೊಳ್ಳಬೇಕೆಂದಾಗ ಸಮಿತಿ ಸದಸ್ಯರಾದ ಹೇಮಲತಾ ನಾಯಕ್ ಮಾತನಾಡಿ ನೀಡಲಾಗುವ ಮೊಟ್ಟೆ ಹಾಗೂ ಇನ್ನಿತರೆ ಆಹಾರದಲ್ಲಿ ಗುಣಮಟ್ಟದ ಆಹಾರ ಪದಾರ್ಥ ಬಳಕೆ ಮಾಡದ ಬಗ್ಗೆ ಸಾಕಷ್ಟು ದೂರುಗಳಿದ್ದು ಪರಿಶೀಲನೆ ಮಾಡಲು ತಿಳಿಸಿದರು.

ದೌರ್ಜನ್ಯ ಕಾಯ್ದೆಯಡಿ ಶಿಕ್ಷೆಯ ಪ್ರಮಾಣ ಕಡಿಮೆ; ಪರಿಶಿಷ್ಟರ ಮೇಲಾಗುವ ದೌರ್ಜನ್ಯವನ್ನು ತಡೆಗಟ್ಟಲು ದಾಖಲಾಗುವ ಪ್ರಕರಣಗಳಲ್ಲಿ ನ್ಯಾಯಾಲಯದಿಂದ ಶಿಕ್ಷೆಯಾಗುವ ಪ್ರಮಾಣ ಬಹಳ ಕಡಿಮೆ ಇದ್ದು ಅಭಿಯೋಜನೆಗೆ ಬೇಕಾದ ಸಾಕ್ಷ್ಯಧಾರಗಳ ಬಗ್ಗೆ ಪರಿಶೀಲನೆ ನಡೆಸಿ ದೌರ್ಜನ್ಯ ಪ್ರಕರಣಗಳು ನಡೆಯದಂತೆ ನೋಡಿಕೊಳ್ಳಬೇಕೆಂದು ಸೂಚನೆ ನೀಡಿದರು.

ಪರಿಶಿಷ್ಟರ ಯೋಜನೆಗಳ ಪರಿಶೀಲನೆಗೆ ಸೂಚನೆ; ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಜನರ ಅಭಿವೃದ್ದಿಗಾಗಿ ಇರುವ ಎಲ್ಲಾ ಇಲಾಖೆಗಳ ಯೋಜನೆಗಳ ಕುರಿತು ಅವಲೋಕನ ಮಾಡಬೇಕು. ಆದರೆ ನೋಡಬೇಕಾದ ಇಲಾಖೆ ಅಧಿಕಾರಿಗಳು ಹೆಚ್ಚು ಗಮನಿಸಿದಂತಿಲ್ಲ, ಎಲ್ಲಾ ಇಲಾಖೆಗಳಲ್ಲಿ ಅನುಷ್ಠಾನ ಮಾಡುವ ಎಸ್‌ಸಿಪಿ, ಟಿಎಸ್‌ಪಿ ಯೋಜನೆಗಳ ಪರಿಶೀಲನೆ ನಡೆಸಿ ಅವರ ಅಭಿವೃದ್ಧಿ ಯಾವ ರೀತಿಯಾಗುತ್ತಿದೆ. ಈ ಜನರ ಕಲ್ಯಾಣಕ್ಕಾಗಿ ಯಾವ ತರಹದಲ್ಲಿ ಯೋಜನೆಗಳನ್ನು ರೂಪಿಸಬೇಕಾಗಿದೆ ಎಂದು ವರದಿಯನ್ನು ದತ್ತಾಂಶದ ಸಮೇತ ಸಂಗ್ರಹಿಸಬೇಕಾದ ಒಣೆಗಾರಿಕೆ ಇಲಾಖೆಗಳ ಮೇಲಿದ್ದು ಸರ್ಕಾರಕ್ಕೆ ವರದಿ ನೀಡಲಾಗುತ್ತದೆ ಎಂದರು.

ಸಭೆಯಲ್ಲಿ ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕರಾದ ಬಿ.ದೇವೇಂದ್ರಪ್ಪ, ಶಾಸಕರಾದ ವೀರೇಂದ್ರ ಪಪ್ಪಿ, ಕೃಷ್ಣನಾಯ್ಕ, ರಾಜೇಂದ್ರ ರಾಜಣ್ಣ, ದುರ್ಯೋದನ ಐಹೊಳೆ, ವಿಧಾನಮಂಡಲದ ಸಮಿತಿ ಅಧೀನ ಕಾರ್ಯದರ್ಶಿ ಪಿ.ಸೀನ, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

---

## ಮಳೆಗೆ ಶಾಂತಿವನ ಜಲಾಶಯ, ಸಾದರಹಳ್ಳಿ, ಲಕ್ಕಿ ಸಾಗರ ಕೆರೆ ಭರ್ತಿ

» **ನಮ್ಮಜನ ಸಮಾಚಾರ**

ಸಿರಿಗೆರೆ: ಬಿಡದೆ ಸುರಿಯುತ್ತಿರುವ ಮಳೆಯಿಂದ ಸಿರಿಗೆರೆ ಶಾಂತಿವನದಲ್ಲಿ ನಿರ್ಮಿಸಿರುವ ಕಿರುಜಲಾಶಯಕ್ಕೆ ದೊಡ್ಡ ಪ್ರಮಾಣದಲ್ಲಿ ನೀರು ಹರಿದು ಬಂದಿದ್ದು ಶಾಂತಿವನ ಜಲಾವೃತ್ತವಾಗಿದೆ.


ಕಿರು ಜಲಾಶಯದ ನಾಲ್ಕು ಗೇಟುಗಳಿಂದ ಬಹಳಷ್ಟು ನೀರು ಹರಿದು ಹೊರಗೆ ಹೋಗುತ್ತಿದೆ. ಈ ದೃಶ್ಯವನ್ನು ನೋಡಲು ಸುತ್ತಲಿನ ಗ್ರಾಮಸ್ಥರು ಶಾಂತಿವನಕ್ಕೆ ಧಾಮಿಸಿ ಸಂಭ್ರಮಿಸಿದರು.

ಶಾಂತಿವನದಿಂದ ಭರ್ತಿಯಾಗಿ ಹರಿಯುತ್ತಿರುವ ಸಾದರಹಳ್ಳಿಕೆರೆ. ಕೊಳಹಾಳ್ ಹಳ್ಳದ ಮೂಲಕ,



ಭರಮ ಸಾಗರದ ಐತಿಹಾಸಿಕ ದೊಡ್ಡ ಕೆರೆ ಸೇರು ಇದೆ. ಈಗ ಆ ಕೆರೆಯೂ ಭರ್ತಿಯಾಗಿರುವುದರಿಂದ ಅಲ್ಲಿಂದ ನೀರು ಹರಿದು ಜಗಳೂರು ತಾಲೂಕಿನ ತುಪದಹಳ್ಳಿ ಕೆರೆ ತಲುಪಿ, ಮುಂದಕ್ಕೆ ಅದು ಮಾನ್ವಿ ತಾಲೂಕಿನ ಸಂಗಮೇಶ್ವರ ತಲುಪಲಿದೆ.

ಸಾದರಹಳ್ಳಿ, ಲಕ್ಕಿ ಸಾಗರ ಭರ್ತಿ: ಅಪರೂಪಕ್ಕೆ ಬಳ್ಳೇಕಟ್ಟೆ ಬಳಿ ಇರುವ ಸಾದರಹಳ್ಳಿಕೆರೆಭರ್ತಿಯಾಗಿದ್ದು ಕೋಡಿ ಬಿದ್ದಿದೆ. ಕೋಡಿ ಬಿದ್ದ ಸ್ಥಳದಲ್ಲಿ ಇಂದು ಗ್ರಾಮದ ಯುವಕರು ಸಂತಸ ಹಚ್ಚಿಕೊಂಡರು. ನೂರಾರು ಯುವಕರು ಕೋಡಿಯ ಒಂದು ಬದಿಯಿಂದ ಮತ್ತೊಂದು ಬದಿಗೆ ಧಾವಿಸಿ ಸಂತಸಪಟ್ಟರು.



---

**ಪ್ರಮುಖ ಸುದ್ದಿ**

### ಸದಸ್ಯರಿಗೆ ಹಾಗೂ ಗ್ರಾಮಸ್ಥರಿಗೆ ಕಾನೂನು ಹೇಳಿಕೊಡುವುದು ಪಿಡಿಒ ಕರ್ತವ್ಯ

## ಪಿಡಿಒಗಳು ಸಮಯ ವ್ಯರ್ಥ ಬೇಡ; ಕೆಲಸ ಮಾಡಿ

» **ಹೊಸದುರ್ಗ**

ಕೆಲ ಪಿಡಿಒಗಳ ವಿರುದ್ಧ ಬಹಳಷ್ಟು ದೂರು ಇವೆ. ಪ್ರತಿ ಹಳ್ಳಿಯಲ್ಲಿಯೂ ಸಮಸ್ಯೆಗಳ ಮಹಾಪೂರವೇ ಇದೆ. ಪಿಡಿಒ ಗಳು ಸಮಯ ವ್ಯರ್ಥ ಮಾಡುವ ಬದಲು, ಸರ್ಕಾರದ ಕೆಲಸ ಮಾಡಿ, ಜನರಿಗೆ ಕೂಡಲೇ ಯೋಜನೆ ತಲುಪುವಂತಾಗಬೇಕು ಎಂದು ಶಾಸಕ ಬಿ.ಜಿ. ಗೋವಿಂದಪ್ಪ ತಾಕೀತು ಮಾಡಿದರು.



ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ 'ವಿವಿಧ ವಸತಿ ಯೋಜನೆಗಳು, ಮಹಾತ್ಮ ಗಾಂಧೀಜಿ ಉದ್ಯೋಗ ಖಾತ್ರಿ ಯೋಜನೆ ಸೇರಿದಂತೆ ಇತರೆ ವಿಷಯಗಳ ಕುರಿತ ಪ್ರಗತಿ ಪರಿಶೀಲನಾ ಸಭೆ' ಅಧ್ಯಕ್ಷತೆ ವಹಿಸಿ ಮಾತನಾಡಿದರು.ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಪಂಚಾಯಿತಿ ಕೇಂದ್ರಕ್ಕೆ ನಿತ್ಯ ಭೇಟಿ ನೀಡಬೇಕು. ಪ್ರತಿ ಗ್ರಾಮಗಳಿಗೂ ಭೇಟಿ ನೀಡಿ, ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು, ಮಾಜಿ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮಸ್ಥರ ವಿಶ್ವಾಸ ಪಡೆದು ಕಾರ್ಯ ನಿರ್ವಹಿಸಬೇಕು. ನಿಯಮಕ್ಕೆ ವಿರುದ್ಧವಾಗಿ ಕಾರ್ಯ ನಿರ್ವಹಿಸಿದರೆ, ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.ಪಿಡಿಒ ಅವರು ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸಿ, ಆಗಿರುವ ತಪ್ಪನ್ನು ಸರಿಪಡಿಸಿಕೊಂಡು ಕಾರ್ಯ ನಿರ್ವಹಿಸಬೇಕು. ಸದಸ್ಯರಿಗೆ ಹಾಗೂ ಗ್ರಾಮಸ್ಥರಿಗೆ ಕಾನೂನು ಹೇಳಿಕೊಡುವುದು ಪಿಡಿಒ ಕರ್ತವ್ಯ. ಕಾನೂನಿನ ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು. ಪಂಚಾಯಿತಿ ಹಣವನ್ನು ವ್ಯರ್ಥವಾಗಿ ವಿನಿಯೋಗಿಸಬೇಡಿ, ಸ್ವಲ್ಪ ಎಚ್ಚರಿಕೆಯಿಂದ ಹಣದ ಸದ್ವಿನಿಯೋಗ ಮಾಡಿಕೊಳ್ಳಬೇಕು. ಪಂಚಾಯಿತಿ ಆದಾಯದ ಮೂಲಗಳನ್ನು ಭದ್ರ ಪಡಿಸಿಕೊಳ್ಳಿ ಎಂದು ಸಲಹೆ ನೀಡಿದರು.ವಿವಿಧ ಯೋಜನೆಗಳಡಿ ವಸತಿ ಕಲ್ಪಿಸಲು, ವಸತಿ ರಹಿತರನ್ನು ಗ್ರಾಮ ಸಭೆಗಳ ಮೂಲಕ ಗುರುತಿಸಬೇಕು. ಪ್ರತಿ ಗ್ರಾಮ ಹಾಗೂ ಮನೆಗಳಿಗೆ ತೆರಳಿ ಅರ್ಹರನ್ನು ಆಯ್ಕೆ ಮಾಡಿ ಎಂದರು. ಕೆ.ಎಂ.ಇ.ಆರ್.ಸಿ ಗಣಿಬಾದಿತ ವಸತಿ ಯೋಜನೆಯಡಿ ವಸತಿ ಸೌಲಭ್ಯಕ್ಕಾಗಿ ತಾಲ್ಲೂಕಿನಲ್ಲಿ 14 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ 53 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ವಸತಿ ನಿಯಮಗಳಡಿ ನೈಜ ಫಲಾನುಭವಿಗಳ ಆಯ್ಕೆ ಮಾಡಲಾಗುವುದು ಎಂದು ನೋಡಲ್ ಅಧಿಕಾರಿ ಮಹಾಂತೇಶ್ ನಾಯ್ಕ್ ಸಭೆಗೆ ತಿಳಿಸಿದರು.ತಾ.ಪಂ. ಇಒ ಸುನೀಲ್ ಕುಮಾರ್, ಯೋಜನಾಧಿಕಾರಿ ಕರಿಯಪ್ಪ ಸೇರಿದಂತೆ ಪಿಡಿಒಗಳಿದ್ದರು.

---

### ನಾಯಕನಹಟ್ಟಿ-ಮುಸ್ಟಲಗುಮ್ಮಿ ರಸ್ತೆ ಅಭಿವೃದ್ಧಿಗೆ 5 ಕೋಟಿ

» **ನಾಯಕನಹಟ್ಟಿ**

ನಾಯಕನಹಟ್ಟಿ-ಮುಸ್ಟಲಗುಮ್ಮಿ ರಸ್ತೆ ಅಭಿವೃದ್ಧಿಗೆ 5 ಕೋಟಿ ರೂ. ಒದಗಿಸಲಾಗಿದೆ ಎಂದು ಶಾಸಕ ಎನ್.ವೈ. ಗೋಪಾಲಕೃಷ್ಣ ಹೇಳಿದರು.



ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸಕ್ತ ಸಾಲಿನಲ್ಲಿ ಉತ್ತಮ ಮಳೆಯಿಂದ ರೈತರಿಗೆ ಖುಷಿಯಾಗಿದೆ. ಆದರೆ ಕೆಲವು ಕಡೆಗಳಲ್ಲಿ ರಸ್ತೆಗಳು ಹಾಳಾಗಿವೆ. ಇವುಗಳನ್ನು ಸರಿಪಡಿಸುವಂತೆ ಪಿಡಬ್ಲೂಡಿಗೆ ಸೂಚಿಸಲಾಗಿದೆ. ನಾಯಕನಹಟ್ಟಿ–ಮ ಲ್ಲೂರಹಳ್ಳಿ–ಮುಸ್ಟಲಗುಮ್ಮಿ ರಸ್ತೆ ವಿಸ್ತರಣೆ ಮತ್ತು ಅಭಿವೃದ್ಧಿಗೆ 5 ಕೋಟಿ ರೂ. ಮಂಜೂರು ಮಾಡಲಾಗಿದೆ. ರಾಜ್ಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸುವ ಚಿತ್ರದುರ್ಗ–ನಾಯಕನಹಟ್ಟಿ –ಮುಸ್ಟಲಗುಮ್ಮಿ ಮಾರ್ಗದಲ್ಲಿ ಈಗಾಗಲೇ ಚಿತ್ರದುರ್ಗ–ನಾಯಕನಹಟ್ಟಿ ವಿಸ್ತರಣೆ ಕೈಗೊಳ್ಳಲಾಗಿದೆ. ಅದರ ಮುಂದುವರಿಕೆ ಕಾರ್ಯವಾಗಿ ನಾಯಕನಹಟ್ಟಿ–ಮುಸ್ಟಲಗುಮ್ಮಿ ರಸ್ತೆ ವಿಸ್ತರಣೆ ಮತ್ತು ಅಭಿವೃದ್ಧಿಯಾಗಲಿದೆ. ಮಳೆ ಒಂದಷ್ಟು ಬಿಡುವು ಕೊಟ್ಟ ತಕ್ಷಣ ಕಾಮಗಾರಿ ಆರಂಭಿಸಲಾಗುವುದು. ಇದರಿಂದ ರಾಜ್ಯ ಹೆದ್ದಾರಿ 45 ಮತ್ತು 65ರ ಸಂಪರ್ಕ ಸುಲಭವಾಗಲಿದೆ. ಜತೆಗೆ ಮಲ್ಲೂರಹಟ್ಟಿ, ಮಸ್ಟಲಗುಮ್ಮಿ ಸೇರಿದಂತೆ ಹಲವಾರು ಗ್ರಾಮಗಳಿಗೆ ಉತ್ತಮ ಸಂಪರ್ಕ ರಸ್ತೆ ನಿರ್ಮಾಣಗೊಳ್ಳಲಿದೆ ಎಂದು ಹೇಳಿದರು.ಶಿಡ್ಲಹಳ್ಳವನ್ನು ದೊಡ್ಡ ಕೆರೆಗೆ ಸಂಪರ್ಕಿಸುವ ಕಾಮಗಾರಿ ಕೈಗೊಳ್ಳುವಂತೆ ಸಾರ್ವಜನಿಕರು ಹಾಗೂ ರೈತರು ಒತ್ತಾಯಿಸಿದ್ದಾರೆ. ಶಿಡ್ಲ ಹಳ್ಳ ಪ್ರತಿ ವರ್ಷ ಹರಿಯುತ್ತಿದೆ. ಈ ಹಳ್ಳದ ನೀರನ್ನು ದೊಡ್ಡ ಕೆರೆಗೆ ಸಂಪರ್ಕಿಸುವ ಯೋಜನೆ ಸಿದ್ದಪಡಿಸುವಂತೆ ಇಲಾಖೆಗೆ ಸೂಚಿಸಲಾಗಿದೆ.




ನಿಮ್ಮ ಮನಸ್ಸಿನ ಬಗ್ಗೆ ನಿಮಗೆಷ್ಟು ಗೊತ್ತು ಸರಣಿ । ಮಕ್ಕಳಲ್ಲಿನ ಮಾನಸಿಕ ಸಮಸ್ಯೆಗಳನ್ನು ನಿರ್ಲಕ್ಷಿಸಿದರೆ ಅವು ಹದಿಹರೆಯಕ್ಕೂ ಮುಂದುವರಿದು, ಅವರ ವ್ಯಕ್ತಿತ್ವದ ಮೇಲೆ ದುಷ್ಪರಿಣಾಮ ಬೀರಬಹುದು. ಹಾಗಾಗಿ, ಪೋಷಕರು ಮತ್ತು ಶಿಕ್ಷಕರು ಮಕ್ಕಳ ಮಾನಸಿಕ ಸಮಸ್ಯೆಗಳ ಬಗ್ಗೆ ತಿಳಿದುಕೊಳ್ಳುವುದನ್ನು ಮಕ್ಕಳ ಪಾಲನೆಯ ಒಂದು ಭಾಗ ಎಂದೇ ಪರಿಗಣಿಸಬೇಕಿದೆ

ಸಣ್ಣ ಮಕ್ಕಳಲ್ಲಿ ಮಾನಸಿಕ ಸಮಸ್ಯೆಗಳು ಎಂದ ಕೂಡಲೇ ಹಲವು ಜನ ಉಬ್ಬು ಏರಿಸುಸುವುದು ಸಹಜ. ಆದರೆ, ಮಕ್ಕಳನ್ನೂ ಮಾನಸಿಕ ಸಮಸ್ಯೆಗಳು ಕಾಡುತ್ತವೆ. ಮಕ್ಕಳಲ್ಲಿ ಕಂಡುಬರುವ ಮಾನಸಿಕ ಸಮಸ್ಯೆಗಳನ್ನು ನಾವು ಮೂರು ವಿಧವಾಗಿ ವಿಂಗಡಿಸುತ್ತೇವೆ: ಶೈಕ್ಷಣಿಕ ಸಮಸ್ಯೆಗಳು, ಭಾವನಾತ್ಮಕ ಸಮಸ್ಯೆಗಳು ಹಾಗೂ ಮನೋರೋಗಗಳು.

ಕೆಲವೊಮ್ಮೆ ಶೈಕ್ಷಣಿಕ ಕಾರಣಗಳಿಂದ ಭಾವನಾತ್ಮಕ ಸಮಸ್ಯೆಗಳು, ಹಾಗೆಯೇ ಭಾವನಾತ್ಮಕ ಸಮಸ್ಯೆಗಳಿಂದ ಮಾನಸಿಕ ರೋಗಗಳು ಉಂಟಾಗುವ ಸಾಧ್ಯತೆಯೂ ಇದೆ. ಒಂದು ಮಗುವನ್ನು ಮಾನಸಿಕ ತಜ್ಞರ ಹತ್ತಿರ ಕರೆದುಕೊಂಡು ಬಂದಾಗ, ನಾವು ಮಾನಸಿಕ ತಜ್ಞರು ಗಮನಿಸುವ ವಿಷಯವೆಂದರೆ, ಆ ಮಗುವಿನ ತಾಯಿ-ತಂದೆ ಅಥವಾ ಮಗುವಿನ ಶಿಕ್ಷಕರು ಅಥವಾ ಸುತ್ತಮುತ್ತಲು ಇರುವವರು ಯಾರೋ ಸಮಸ್ಯೆಯಿಂದ ಬಳಲುತ್ತಿರುತ್ತಾರೆ ಎಂಬುದು. ಕೆಲವು ಸಮಸ್ಯೆಗಳಂತೂ ತಾಯಿ-ತಂದೆ ಅಥವಾ ಶಿಕ್ಷಕರು ಮಗುವಿನ ಮೇಲೆ ಸಾಕಷ್ಟು ಒತ್ತಡ ಹೇರುವಾಗ ಉಂಟಾಗುತ್ತವೆ. ಮಕ್ಕಳಲ್ಲಿ ಈ ಸಮಸ್ಯೆಗಳು ಬರಲು ಕಾರಣ ಏನು ಮತ್ತು ಇದಕ್ಕೆ ಚಿಕಿತ್ಸೆ ಏನು ಅನ್ನುವುದರ ಬಗ್ಗೆ ಈ ಲೇಖನದಲ್ಲಿ ತಿಳಿದುಕೊಳ್ಳೋಣ.

ಮಕ್ಕಳಲ್ಲಿ ಮಾನಸಿಕ ಸಮಸ್ಯೆಗಳು ಕಾಣಿಸಿಕೊಳ್ಳಲು ಪ್ರಮುಖ ಕಾರಣಗಳಲ್ಲಿ ಅನುವಂಶಿಕ ಮತ್ತು ಮಿದುಳಿನ ನ್ಯೂನತೆಗಳು ಪ್ರಮುಖವಾಗಿವೆ. ಇವುಗಳನ್ನು ನಾವು 'ಜೈವಿಕ ಕಾರಣಗಳು' ಎಂದು ಕರೆಯುತ್ತೇವೆ. ಮಗು ಹುಟ್ಟುವಾಗ ತಾಯಿಯ ಜನನನಾಳದಲ್ಲಿ ಸಿಕ್ಕಿಬಿದ್ದರೆ ಅಥವಾ ಹುಟ್ಟಿದ ಕೂಡಲೇ ತಲೆಗೆ ಜಾಂಡಿಸ್ ಏರುವುದು, ಜ್ವರ ಏರುವುದು ಅಥವಾ ಹುಟ್ಟಿದ ಕೂಡಲೇ ಮಗು ಅಳದಿರುವುದು - ಇವು ಮಿದುಳಿಗೆ ಘಾಸಿ ಉಂಟುಮಾಡಬಹುದು ಅಥವಾ ಮಿದುಳಿನ ಮೇಲ್ಮೈಗೆ ಅಥವಾ ಒಳ ಮೈಗೆ ಗಾಯಗಳಾಗಿ ಸಮಸ್ಯೆಗಳನ್ನು ಉಂಟುಮಾಡಬಹುದು.



ಇದರಿಂದಾಗಿ ಹಲವು ಮಕ್ಕಳಲ್ಲಿ ಬುದ್ಧಿಮಾಂದ್ಯತೆ, ನಿರ್ದಿಷ್ಟ ಕಲಿಕಾ ಸಮಸ್ಯೆಗಳು ಅಥವಾ ಅತಿ ಚಟುವಟಿಕೆ ಉಂಟಾಗಬಹುದು. ಇನ್ನು, ದೈಹಿಕ ಅಥವಾ ಮಾನಸಿಕ ದೌರ್ಜನ್ಯಗಳನ್ನು ಅನುಭವಿಸಿದ ಮಕ್ಕಳಲ್ಲಿ ಮಾನಸಿಕ ಒತ್ತಡದ ಸಮಸ್ಯೆಗಳು ಜಾಸ್ತಿ ಕಂಡುಬರುತ್ತವೆ. ಮಕ್ಕಳು ಬೆಳೆಯುವ ವಾತಾವರಣ, ಅದರಲ್ಲಿಯೂ ಕುಟುಂಬದ ಹಿನ್ನೆಲೆ - ಅಂದರೆ, ಯಾವ ಕುಟುಂಬದಲ್ಲಿ ಮಾನಸಿಕ ಕಾಯಿಲೆ ಇರುವವರು ಇರುತ್ತಾರೆ ಅಥವಾ ಯಾರ ಮನೆಗಳಲ್ಲಿ ಮದ್ಯ-ಮಾದಕದ್ರವ್ಯ ವ್ಯಸನಿಗಳು ಇರುತ್ತಾರೆ ಹಾಗೂ ಸಣ್ಣ ವಯಸ್ಸಿನಲ್ಲಿ ಅಪ್ಪ-ಅಮ್ಮನಿಂದ ನಿರ್ಲಕ್ಷಕ್ಕೆ ಒಳಗಾಗಿರುತ್ತಾರೋ ಅಂತಹ ಮಕ್ಕಳಲ್ಲಿ ಮಾನಸಿಕ ಸಮಸ್ಯೆಗಳು ಹೆಚ್ಚು ಎಂಬುದು ಸಂಶೋಧನೆಗಳ ಸಾರ. ಕಡುಬಡತನದಲ್ಲಿ ಬೆಳೆದುಬರುವ ಮಕ್ಕಳು ಅಥವಾ ಅನನುಕೂಲ ಹಿನ್ನೆಲೆಯಿಂದ ಬೆಳೆಯುವ ಮಕ್ಕಳಲ್ಲಿ ಮಾನಸಿಕ ಸಮಸ್ಯೆಗಳು ಹೆಚ್ಚು.

ಯಾವ ಸಮುದಾಯದಲ್ಲಿ ಮಾನಸಿಕ ಆರೋಗ್ಯ ಚಿಕಿತ್ಸಾ ಕೇಂದ್ರಗಳ ಕೊರತೆ ಇರುತ್ತದೆಯೋ, ಯಾವ ಸಮುದಾಯದಲ್ಲಿ ಮಾನಸಿಕ ಆರೋಗ್ಯ ಚಿಕಿತ್ಸೆಯ ಬಗ್ಗೆ ಕಳಂಕದ ಧೋರಣೆ ಇರುತ್ತದೆಯೋ ಹಾಗೂ ಯಾವ ಸಮುದಾಯದಲ್ಲಿ ಈ ಕಾಯಿಲೆಗಳ ಕುರಿತು ಮೂಢನಂಬಿಕೆ (ಮಾಟ-ಮಂತ್ರ, ದೇವರ ಶಾಪ, ಭೂತದ ಉಪದ್ರ ಇತ್ಯಾದಿ) ಇರುತ್ತದೆಯೋ ಅಂತಹ ಸಮುದಾಯಗಳಲ್ಲಿ ಸಣ್ಣ ವಯಸ್ಸಿನ ಮಕ್ಕಳಿಗೆ ಮಾನಸಿಕ ಸಮಸ್ಯೆ ಅಧಿಕ. ಅಲ್ಲದೆ, ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ಲಭಿಸದೆ ಈ ಮಾನಸಿಕ ಸಮಸ್ಯೆಗಳು ಹೆಚ್ಚಾಗುತ್ತಲೇ ಹೋಗುವುದನ್ನು ಕಾಣಬಹುದು.

ಆತಂಕದ ಅಸ್ವಸ್ಥತೆಗಳು, ಖಿನ್ನತೆ, ಹೈಪರ್ ಆಕ್ಟಿವಿಟಿ ಡಿಸಾರ್ಡರ್‌ನಂತಹ (ಎಡಿಎಚ್‌ಡಿ) ಅನೇಕ ಮನೋವೈದ್ಯಕೀಯ ಕಾಯಿಲೆಗಳು ಬಾಲ್ಯ ಅಥವಾ ಹದಿಹರೆಯದಲ್ಲಿಯೇ ಪ್ರಾರಂಭವಾಗುತ್ತವೆ. ಈ ಅಸ್ವಸ್ಥತೆಗಳು ಮಗುವಿನ ಬೆಳವಣಿಗೆ, ಶಿಕ್ಷಣ ಹಾಗೂ ಬಾಂಧವ್ಯಗಳ ಮೇಲೆ ಗಮನಾರ್ಹ ಪರಿಣಾಮ ಬೀರಬಹುದು. ಇದರಿಂದಾಗಿ ಶಾಲೆಯ ಫಲಿತಾಂಶ, ಮಗುವಿನ ಬಾಂಧವ್ಯಗಳು, ಜೀವನ ನಿರ್ವಹಣೆಯ ಮೇಲೆ ಸಾಕಷ್ಟು ಪ್ರಭಾವ ಉಂಟಾಗುತ್ತದೆ.

ಮಕ್ಕಳ ಮಾನಸಿಕ ಸಮಸ್ಯೆಗಳ ಚಿಕಿತ್ಸೆ ಎನ್ನುವಾಗ ನೆನಪಿಟ್ಟುಕೊಳ್ಳಬೇಕಾದ ವಿಷಯವೇನೆಂದರೆ, ಮಕ್ಕಳ ತಾಯಿ-ತಂದೆ, ಕೆಲವೊಮ್ಮೆ ಶಿಕ್ಷಕರು, ಅಜ್ಜಿ-ಅಜ್ಜ, ಮತ್ತೆ ಕೆಲವೊಮ್ಮೆ ಮಕ್ಕಳ ಸ್ನೇಹಿತರು ಕೂಡ ಆಪ್ತ ಸಲಹೆಗೆ ಅರ್ಹರಾಗಿರುತ್ತಾರೆ. ಮಕ್ಕಳ ಮನೋಚಿಕಿತ್ಸೆಯಲ್ಲಿ ಪರಿಹಾರ ಬೋಧನೆ, ಆಪ್ತಸಮಾಲೋಚನೆ (ಕೌನ್ಸೆಲಿಂಗ್), ಫ್ಯಾಮಿಲಿ ಕೌನ್ಸೆಲಿಂಗ್ ಇವುಗಳ ಪಾತ್ರ ಬಹಳ ಮುಖ್ಯ. ಮಕ್ಕಳಿಗೆ ಗೀಳು ಮನೋರೋಗದಂತಹ ಸಮಸ್ಯೆಗಳು ಇರುವಾಗ ಕೆಲವೊಮ್ಮೆ ವರ್ತನಾ ಚಿಕಿತ್ಸೆಯ ಏರ್ಪಾಡು ಮಾಡಬೇಕಾಗುತ್ತದೆ.



ಅತಿಕ್ರಮಣಕಾರಿ ವರ್ತನೆಗಳು, ಆತ್ಮಹತ್ಯಾ ಪ್ರಯತ್ನಗಳು, ದಿನಗಟ್ಟಲೆ ಊಟ-ತಿಂಡಿ ಬಿಟ್ಟು ಹಠ ಮಾಡುವುದು ಮೊದಲಾದ ಸಂದರ್ಭದಲ್ಲಿ ಮಕ್ಕಳಿಗೆ ಮಾತ್ರೆಚಿಕಿತ್ಸೆಕೂಡಉಪಯೋಗಕ್ಕೆಬರುತ್ತದೆ.ವರ್ತನಾ ಚಿಕಿತ್ಸೆ ಮತ್ತು ಕೌನ್ಸಿಲಿಂಗ್‌ನಿಂದ ಉಪಯೋಗವಾಗದೆ ಇದ್ದಲ್ಲಿ ಮಾತ್ರ ಮಕ್ಕಳ ಮಾನಸಿಕ ಸಮಸ್ಯೆಗಳಿಗೆ ಮಾತ್ರೆ ಚಿಕಿತ್ಸೆ ಉಪಯೋಗಿಸಲಾಗುತ್ತದೆ.

ಸಣ್ಣ ವಯಸ್ಸಿನಲ್ಲಿ ನಿರ್ಲಕ್ಷ್ಯ ಅಥವಾ ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳಲ್ಲಿ ಭಾವನಾತ್ಮಕ ಸಮಸ್ಯೆಗಳು ಕಂಡುಬರುತ್ತವೆ. ಬೆರಳು ಚೀಪುವುದು, ಹಾಸಿಗೆಯಲ್ಲಿ ಮೂತ್ರ ಮಾಡುವುದು, ನಿದ್ರೆಯಲ್ಲಿ ಎದ್ದು ಕಿರುಚುವುದು ಮುಂತಾದ ಭಾವನಾತ್ಮಕ ಸಮಸ್ಯೆಗಳು ಕಂಡುಬರುತ್ತವೆ. ಇಂತಹ ಘಟನೆಗಳಿಂದ ಮಕ್ಕಳ ಸ್ವಾಭಿಮಾನವು ಘಾಸಿಗೊಂಡಿರುತ್ತದೆ. ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಮಕ್ಕಳಿಗೆ ಸಣ್ಣ ವಯಸ್ಸಿನಲ್ಲಿ ಸರಿಯಾದ ಚಿಕಿತ್ಸೆ ಸಿಗದಿದ್ದಲ್ಲಿ ಖಿನ್ನತೆ, ಆತಂಕ ಮುಂತಾದ ಅನಾರೋಗ್ಯಗಳು ದೀರ್ಘಕಾಲೀನ ಪರಿಣಾಮ ಉಂಟುಮಾಡಿ, ಪ್ರೌಢಾವಸ್ಥೆಯಲ್ಲೂ ದುಷ್ಪರಿಣಾಮ ಬೀರುತ್ತವೆ. ಆದ್ದರಿಂದ ಸಣ್ಣ ವಯಸ್ಸಿನಲ್ಲಿ ಮನಸ್ಸಿನ ಸಮಸ್ಯೆಗಳ ಬಗ್ಗೆ ಶಿಕ್ಷಕರು, ತಾಯಿ-ತಂದೆಯರು ಸರಿಯಾಗಿ ತಿಳಿದಿರಬೇಕು.

ಕೆಲವು ಸಮಸ್ಯೆಗಳನ್ನಂತೂ ಮೊದಲೇ ಗುರುತಿಸಿ ಕೂಡಲೇ ಸೂಕ್ತ ಹೆಜ್ಜೆ ಇಟ್ಟಲ್ಲಿ ಬಹುಬೇಗ ಹತೋಟಿಗೆ ಬರುತ್ತವೆ. ಎಲ್ಲಕ್ಕಿಂತ ಮುಖ್ಯವಾಗಿ, ಸಣ್ಣ ಮಕ್ಕಳಲ್ಲಿಯೂ ಮಾನಸಿಕ ಸಮಸ್ಯೆಗಳು ಉಂಟಾಗುವ ಸಾಧ್ಯತೆಗಳು ಇವೆ ಎನ್ನುವುದನ್ನು ಜನಸಾಮಾನ್ಯರು ತಿಳಿದುಕೊಳ್ಳಬೇಕು. ಅವುಗಳ ಪರಿಹಾರ ಕ್ರಮಗಳ ಬಗ್ಗೆ ತಿಳಿದುಕೊಳ್ಳಬೇಕು ಮತ್ತು ಅವರಿಗೆ ಅದು ಸಿಗುವ ಹಾಗೆ ಮಾಡಬೇಕು. ಕೆಲವೊಂದು ಸಂದರ್ಭದಲ್ಲಿ ಬೆಳವಣಿಗೆಯ ಸಮಸ್ಯೆಗಳು ಕಾಡುತ್ತವೆ; ಉದಾಹರಣೆಗೆ ಆಟಿಸಂ. ಇಂಥದ್ದನ್ನು ಬಹುಬೇಗ ಗುರುತಿಸಿ, ಸೂಕ್ತ ಚಿಕಿತ್ಸೆ ಕೊಡಿಸುವ ಅವಶ್ಯಕತೆ ಹೆಚ್ಚು. ಒಟ್ಟಿನಲ್ಲಿ ಮಕ್ಕಳ ಮಾನಸಿಕ ಸಮಸ್ಯೆಗಳ ಬಗ್ಗೆ ತಿಳಿದುಕೊಳ್ಳುವುದು ಮಕ್ಕಳ ಪಾಲನೆ-ಪೋಷಣೆಯ ಒಂದು ಭಾಗ ಎಂದೇ ಭಾವಿಸಬೇಕಿದೆ.

■ ಕೃಪೆ: ಈ ದಿನ



■ ಲೇಖನ
ಡಾ. ಪಿ ವಿ ಭಂಡಾರಿ




## ಹೊಸಹಳ್ಳಿ ಶಾಲೆ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆ

**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ಹೊಸಹಳ್ಳಿ ಸರ್ಕಾರಿ ಹಿರಿಯಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಆಗಸ್ತ್ಯ ಪೌಂಡೇಷನ್ ಮತ್ತು ಟಾಟಾ ಪವರ್‌ಕಂಪನಿ ನಡೆಸಿದ ವಿಜ್ಞಾನ ಮೇಳದ ಚಿತ್ರಕಲೆ ವಿಭಾಗದಲ್ಲಿ ವಿಜೇತರಾಗಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆಂದು ಶಾಲೆಯ ಮುಖ್ಯೋಪಾಧ್ಯಾಯ ಕೆ.ಎಸ್.ಶ್ರೀಕಾಂತ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಆಗಸ್ತ್ಯ ಪೌಂಡೇಷನ್ ಮತ್ತು ಟಾಟಾ ಪವರ್‌ಕಂಪನಿಗಳು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸಾಕಷ್ಟು ಸಹಕಾರವನ್ನು ನೀಡುತ್ತಾ ಬಂದಿದ್ದಾರೆ. ಮಕ್ಕಳ ಕಲಿಕೆಗೆ ಪ್ರೇರಣೆಯಾಗುವಂತಹ ಹಲವಾರು ಕೊಡುಗೆಗಳನ್ನು ನೀಡಿದ್ದಾರೆ. ವಿದ್ಯಾರ್ಥಿಗಳು ಸಹ ಇವರು ನೀಡುತ್ತಿರುವ ಕೊಡುಗೆಗಳ ಸಹಕಾರದಿಂದ ಉತ್ತಮ ಪ್ರಗತಿಯನ್ನು ದಾಖಲಿಸಿದ್ದಾರೆಂದು ಅವರು ತಿಳಿಸಿದರು. 8ನೇ ತರಗತಿ ವಿದ್ಯಾರ್ಥಿಗಳಾದ ಹೇಮಂತಕುಮಾರ್ ಮತ್ತು ನಂದೀಶ್ ವಿಜ್ಞಾನ ಮೇಳದ ಚಿತ್ರಕಲೆ ವಿಭಾಗದಲ್ಲಿ ಉತ್ತಮ ಪ್ರದರ್ಶನ ನೀಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಆಗಸ್ತ್ಯ ಪೌಂಡೇಷನ್ ಶಿಕ್ಷಕ ಬಸವೇಶ್ವರ, ಟಾಟಾ ಪವರ್‌ಕಂಪನಿಯ ಹಿರಿಯ ವಿಜ್ಞಾನ ರೀತು ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಬಿ.ಸಿ.ಸಂಜೀವಮೂರ್ತಿ ಕಚೇರಿಯಲ್ಲಿ ಶಿವಮೊಗ್ಗಹಾಲು ಒಕ್ಕೂಟ ಕಲ್ಯಾಣ ಟ್ರಸ್ಟ್ ವತಿಯಿಂದ ನೀಡಲಾದ ಚೆಕನ್ನು ವಿತರಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T